ಸಂಪುಟ : 10 ಸಂಚಿಕೆ: 124 ಪುಟ : 4+2 ಬೆಲೆ: 3.00 ಬುಧವಾರ ಜೂನ್ 18 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 124 Pages : 4+2 Price : 3.00 Wednesday June 18 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜೂ.21ರಂದು 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಸರ್ಕಾರ, ಕರ್ನಾಟಕ ಸರ್ಕಾರ, ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನಗರಸಭೆ ಗದಗ ಬೆಟಗೇರಿ ಇವರ ಸಂಯುಕ್ತ ಆಶ್ರಯದಲ್ಲಿ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಉದ್ಘಾಟನಾ ಸಮಾರಂಭವನ್ನು "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" ಎಂಬ ಘೋಷವಾಕ್ಯದೊಂದಿಗೆ ಜೂನ್ 21ರಂದು ಬೆಳಿಗ್ಗೆ 6.30 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ ಗುಂಡೂರಾವ್ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ ಅವರು ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿ ಹಾಗೂ ಗದಗ ▸▸3ನೇ ಪುಟಕ್ಕೆ

**ನಾರಾಯಣಪೂರ ಗ್ರಾಮದ ಮಧುಶ್ರೀ ಅಂಗಡಿ ಕೊಲೆ ಪ್ರಕರಣ । ತನಿಖೆಯ ದಿಕ್ಕು ತಪ್ಪಿಸಿದ ಹಂತಕ**

# ಸಿಕ್ಕದ ತಲೆ ಬುರುಡೆಗಾಗಿ ನಿಲ್ಲದ ಶೋಧ



■ ವಿಜಯಸಾಕ್ಷಿ ಸುದ್ದಿ, ಗದಗ

ವಿಕೃತ ಮನಸ್ಸಿನ ಹಂತಕನೊಬ್ಬನ ಕ್ರೂರ ಕೃತ್ಯ ಮಣ್ಣಲ್ಲಿ ಮಣ್ಣಾಗಿಬಿಡುವ ಹಂತದಲ್ಲಿತ್ತು. ಆದರೆ, ಪೊಲೀಸರ ಚಾಣಾಕ್ಷತನದ ತನಿಖೆಯಿಂದ ಆರು ತಿಂಗಳ ನಂತರ ಕೊಲೆಯೊಂದರ ರಹಸ್ಯ ಬಯಲಾಗಿದೆ. ಸಾಕ್ಷಿ ನಾಶ ಮಾಡಿ ಪೊಲೀಸರಿಗೇ ಚಳ್ಳೆಹಣ್ಣು ತಿನ್ನಿಸಿ ಬಚಾವಾಗುತ್ತಿದ್ದ ಹಂತಕನ ಕೈಗಳಿಗೆ ಕೊನೆಗೂ ಕೋಳ ಬಿದ್ದಿದೆ.

**ಪ್ರಕರಣವೇನು?:** ಗದಗ ತಾಲೂಕಿನ ನಾರಾಯಣಪೂರ ಗ್ರಾಮದ ಮಧುಶ್ರೀ ಅಂಗಡಿ ಎಂಬ ಯುವತಿ ಅದೇ ಗ್ರಾಮದ ಸತೀಶ್ ಹಿರೇಮಠ ಎಂಬುವನೊಂದಿಗೆ ಪ್ರೇಮದ ಬಲೆಯಲ್ಲಿ ಸಿಲುಕಿದ್ದಳು. ಐದಾರು ವರ್ಷ ಇಬ್ಬರೂ ಪರಸ್ಪರ ಪ್ರೀತಿಸಿದ್ದರು ಕೂಡ. ಆದರೆ, ಮಧುಶ್ರೀ ಕುಟುಂಬಸ್ಥರಿಗೆ ಈ ಪ್ರೀತಿ ಪ್ರೇಮದ ವಿಷಯ ಗೊತ್ತಾದಾಗ, ಗದಗ ನಗರದ ಸಂಬಂಧಿಕರ ಮನೆಯಲ್ಲಿ ಮಧುಶ್ರೀಯನ್ನು ಬಿಟ್ಟಿದ್ದರು.

**ಪ್ರಿಯತಮೆಯ ಉಸಿರು ನಿಲ್ಲಿಸಿದ:** 2024ರ ಡಿಸೆಂಬರ್ 16 ರಂದು ಪ್ರೇಯಸಿ ಮಧುಶ್ರೀಯನ್ನು ಕರೆದುಕೊಂಡು ಗದಗ ತಾಲೂಕಿನ ನಾರಾಯಣಪುರ ಗ್ರಾಮದ ಹೊರವಲಯದ ತಮ್ಮ ಜಮೀನಿಗೆ ಬಂದಿದ್ದ. ಆಗ ಮಧುಶ್ರೀ ಮದುವೆಯಾಗು ಎಂದು ಹಠ ಹಿಡಿದಿದ್ದಾಳೆ. ಈ ಸಂದರ್ಭದಲ್ಲಿ ಇಬ್ಬರ ನಡುವೆ ಜಗಳವಾಗಿ, ಜಗಳ ವಿಕೋಪಕ್ಕೆ ತಿರುಗಿತ್ತು. ರೊಚ್ಚಿಗೆದ್ದ ಸತೀಶ್ ಹಿರೇಮಠ ಮಧುಶ್ರೀ ಧರಿಸಿದ್ ವೇಲ್‌ನಿಂದ ಆಕೆಯ ಕುತ್ತಿಗೆಗೆ ಬಿಗಿದು ಉಸಿರು ನಿಲ್ಲಿಸಿಬಿಟ್ಟಿದ್ದ. ತನ್ನ ಜಮೀನಿನಲ್ಲಿ ಮಧುಶ್ರೀಯನ್ನು ಕೊಂದು ಪಕ್ಕದ ಹಳ್ಳದಲ್ಲಿ ಹೂತುಹಾಕಿದ್ದ.

**ದಾಖಲಾಯ್ತು ಮಿಸ್ಸಿಂಗ್ ಕೇಸ್:** ಇದಾದ ಬಳಿಕ ಮನೆಯವರೆಲ್ಲರೂ ಮಧುಶ್ರೀಗಾಗಿ ಅರಸಿ, ವಿಧಿಯಿಲ್ಲದೇ 2025ರ ಜನವರಿ 12ರಂದು ಬೆಟಗೇರಿ ಬಡಾವಣೆ ಪೊಲೀಸ್ ಠಾಣೆಯಲ್ಲಿ ಮಹಿಳೆ ನಾಪತ್ತೆ ಪ್ರಕರಣ ದಾಖಲಿಸಿದ್ದರು. ಆಗ ಪೊಲೀಸರು ಸಹಜವಾಗಿ ಸತೀಶ್ ಹಿರೇಮಠನ ಮೇಲೆ ಅನುಮಾನಗೊಂಡು ವಿಚಾರಣೆ ಪ್ರಾರಂಭಿಸಿದರು. ತನಿಖೆಯ ವೇಳೆ, ಮಧುಶ್ರೀ ನಾಪತ್ತೆಯಾದ ದಿನ ಇಬ್ಬರೂ ಒಂದೇ ಬೈಕ್‌ನಲ್ಲಿ ▸▸3ನೇ ಪುಟಕ್ಕೆ

### ಬುರುಡೆ ಬಿಟ್ಟ ಹಂತಕ

ಪಿಎಸ್‌ಐ ಮಾರುತಿ ಜೋಗದಂಡಕರ ಸದರಿ ಪ್ರಕರಣದಲ್ಲಿ ಚಾಣಾಕ್ಷತೆಯಿಂದ ಪ್ರಕರಣ ಬೇಧಿಸಿದ್ದಾರೆ. ಮಾರುತಿ ಜೋಗದಂಡಕರ, ಸಿಪಿಐ ಧೀರಜ್ ಶಿಂಧೆ ನೇತೃತ್ವದಲ್ಲಿ ಸಿಬ್ಬಂದಿಗಳು, ವೈದ್ಯಕೀಯ ಅಧಿಕಾರಿಗಳ ತಂಡ, ಎಫ್‌ಎಸ್‌ಎಲ್ ತಂಡಗಳು ಸತೀಶ್ ಹಿರೇಮಠ ತೋರಿಸಿದಲ್ಲೆಲ್ಲಾ ಅಗೆದು ಶೋಧ ನಡೆಸಿದರು. ಮೊದಲು ಅಗೆದ ಸ್ಥಳದಲ್ಲಿ ಯುವತಿಯ ಚಪ್ಪಲಿ, ಬಟ್ಟೆ ಹಾಗೂ ಸುಟ್ಟಿದ್ದ ಕೂದಲುಗಳು ದೊರೆತರೂ ತಲೆ ಬುರುಡೆ ಮಾತ್ರ ಪತ್ತೆಯಾಗಿಲ್ಲ. ತಲೆ ಬುರುಡೆ ಶೋಧ ಕಾರ್ಯವನ್ನು ಮೊಟಕುಗೊಳಿಸಿ ಮಂಗಳವಾರ ವಾಪಸ್ಸಾಗಿದ್ದಾರೆ. ಆದರೆ, ಬುರುಡೆ ಸಿಗುವರೆಗೂ ಶೋಧ ನಿಲ್ಲದು ಎಂದು ಎಸಿ ಗಂಗಪ್ಪ ಹೇಳಿದ್ದಾರೆ.



**ರಾಮಗಿರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿ ವೀಕ್ಷಿಸಿದ ಜಿ.ಪಂ ಸಿಇಓ ಭರತ್ ಎಸ್**

# ಮಕ್ಕಳಿಗೆ ಪರಿಶುದ್ಧ ಆಹಾರ ನೀಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ರಾಮಗಿರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಸಾಪುರ ಗ್ರಾಮದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನಿರ್ಮಾಣವಾಗಿರುವ ಸಿ.ಸಿ ಚರಂಡಿ, ಸಿ.ಸಿ ರಸ್ತೆಗಳನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಪರಿಶೀಲಿಸಿದರು.

ನಂತರ ಸಮೀಪದ ರಾಮಗಿರಿ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ, ಮಕ್ಕಳ ದಾಖಲಾತಿ, ಬೋಧನಾ ಗುಣಮಟ್ಟ, ಸಿಬ್ಬಂದಿ ಹಾಜರಾತಿ, ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯ ಶೈಕ್ಷಣಿಕ ಪ್ರಗತಿ, ಶಾಲಾ ಶೌಚಾಲಯಗಳ ಪರಿಶೀಲನೆ ನಡೆಸಿದರು. ಅಡಿಗೆ ಕೋಣೆಗಳಿಗೆ ಭೇಟಿ ನೀಡಿ ಅಡಿಗೆ ಸಿಬ್ಬಂದಿಗಳೊಂದಿಗೆ ಮಾತನಾಡಿ, ಬಿಸಿ ಊಟಕ್ಕೆ ಬಳಸುವ ಮೆನು ಚಾರ್ಟ್, ಆಹಾರ ಧಾನ್ಯಗಳ ಗುಣಮಟ್ಟಗಳನ್ನು ಪರೀಕ್ಷಿಸಿ ಉತ್ತಮವಾಗಿ, ಸ್ವಚ್ಛವಾಗಿ ಅಡುಗೆ ಮಾಡಿ ಮಕ್ಕಳಿಗೆ ನೀಡಬೇಕೆಂದು ಸಲಹೆ ನೀಡಿದರು.

ಅಕ್ಷರ ದಾಸೋಹಕ್ಕೆ ಬಳಕೆ ಮಾಡುವ ತರಕಾರಿ, ಸೊಪ್ಪು, ಮಕ್ಕಳಿಗೆ ವಿತರಿಸುವ ಮೊಟ್ಟೆ, ಬಾಳೆಹಣ್ಣಿನ ಬಗ್ಗೆ ಮಾಹಿತಿ ಪಡೆದು ಸ್ವಚ್ಛತೆಯನ್ನು ವೀಕ್ಷಿಸಿದರು.




ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಶಾಲಾ ಆವರಣದಲ್ಲಿ ವಿದ್ಯಾರ್ಥಿಗಳೊಂದಿಗೆ ಸಸಿ ನೆಡುವುದರ ಮೂಲಕ ಪರಿಸರ ದಿನಾಚರಣೆಯ ಜಾಗೃತಿಯನ್ನು ಮೂಡಿಸಿದರು.

ವರ್ಗ ಕೋಣೆಗಳಿಗೆ ತೆರಳಿ ವಿಜ್ಞಾನದ ವಿಷಯವಾಗಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ನಂತರ ಪಟ್ಟಣಕ್ಕೆ ಆಗಮಿಸಿದ ಅವರು, ಡಿ.ದೇವರಾಜ್ ಅರಸು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿ ಆಹಾರದ ಗುಣಮಟ್ಟ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಸ್ನಾನ ಗೃಹ, ಶೌಚಾಲಯಗಳ ಸ್ವಚ್ಛತೆಯನ್ನು ವೀಕ್ಷಿಸಿದರು. ಪಟ್ಟಣದ ಶ್ರೀ ವೀರಗಂಗಾಧರ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ಮಕ್ಕಳ ದಾಖಲಾತಿ, ಶಿಕ್ಷಕರ ಬೋಧನಾ ಗುಣಮಟ್ಟ, ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶದ ಮಾಹಿತಿ ಪಡೆದರು.

ಈ ವೇಳೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಜಗದೀಶ್ ಕುರುಬರ, ತಾಂತ್ರಿಕ ಸಂಯೋಜಕ ಹರೀಶ್ ಸೊಬರದ, ತಾಲೂಕು ಐಇಸಿ ಸಂಯೋಜಕ ಮಂಜುನಾಥ ಸ್ವಾಮಿ ಹೆಚ್.ಎಂ, ತಾಂತ್ರಿಕ ಸಹಾಯಕ ಶ್ರೀನಿವಾಸ್, ಗ್ರಾ.ಪಂ ಸಿಬ್ಬಂದಿ, ಶಿಕ್ಷಕರು, ವಿದ್ಯಾರ್ಥಿ ನಿಲಯದ ಮೇಲ್ವಿಚಾರಕರು ಉಪಸ್ಥಿತರಿದ್ದರು.

ಈ ವೇಳೆ 10ನೇ ತರಗತಿ ವಾರ್ಷಿಕ ಪರೀಕ್ಷೆಯಲ್ಲಿ ಆಂಗ್ಲ ಭಾಷೆಯಲ್ಲಿ ಶೇ.100 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದನ್ನು ತಿಳಿದು, ಉತ್ತಮ ಸಾಧನೆ ಮಾಡಿದ ಆಂಗ್ಲಭಾಷಾ ಶಿಕ್ಷಕಿ, ವಿಕಲಚೇತನರಾಗಿರುವ ಎ.ಎಂ.ಕುಂಬಾರ ಅವರಿಗೆ ಜಿ.ಪಂ ಸಿಇಓ ಭರತ್ ಎಸ್ ಅಭಿನಂದನೆಗಳನ್ನು ಸಲ್ಲಿಸಿದರು.

## ಇ-ಕೈವೈಸಿ ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಪಡಿತರ ಚೀಟಿ ಹೊಂದಿರುವ ಕುಟುಂಬ ಸದಸ್ಯರ ಇ ಕೈವೈಸಿಯನ್ನು ಜೂನ್ 30 ರೊಳಗಾಗಿ ಶೇ 100 ರಷ್ಟನ್ನು ಸಂಪೂರ್ಣಗೊಳಿಸಬೇಕಾಗಿರುವುದರಿಂದ ಎಲ್ಲ ಪಡಿತರ ಚೀಟಿದಾರರು ಹಾಗೂ ಕುಟುಂಬ ಸದಸ್ಯರು ಜೂನ್ 30 ಒಳಗಾಗಿ ನ್ಯಾಯಬೆಲೆ ಅಂಗಡಿಗೆ ತೆರಳಿ ಕಡ್ಡಾಯವಾಗಿ ಇ ಕೈವೈಸಿ ಮಾಡಿಸಬೇಕು.

ಇ ಕೈವೈಸಿ ಮಾಡಲು ಬಾಕಿ ಉಳಿದಿರುವ ಪಡಿತರ ಚೀಟಿಯಲ್ಲಿನ ಸದಸ್ಯರು ಊರಲ್ಲಿ ಇಲ್ಲದೆ ಇದ್ದ ಪಕ್ಷದಲ್ಲಿ ಪಡಿತರ ಚೀಟಿಯ ಸಂಖ್ಯೆ, ಆಧಾರ್ ಕಾರ್ಡ್ ನೊಂದಿಗೆ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆ ತಾಲೂಕು ಗ್ರಾಮದಲ್ಲಿರುವ ನ್ಯಾಯಬೆಲೆ ಅಂಗಡಿಯಲ್ಲಿ ಇ ಕೈವೈಸಿ ಮಾಡಿಕೊಳ್ಳಸಿಕೊಳ್ಳಬೇಕೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರಮಟ್ಟದ ಜಂಗಿ ನಿಕಾಲಿ ಕುಸ್ತಿಗೆ ಮುಖಂಡ ಕೃಷ್ಣಗೌಡ ಪಾಟೀಲ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗೈಕ್ಯ ಪಂಚಾಕ್ಷರಿ ಗವಾಯಿಗಳರವರ 81ನೇ ಪುಣ್ಯಸ್ಮರಣೋತ್ಸವ ಹಾಗೂ ಪದ್ಮಭೂಷಣ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳರವರ 15ನೇ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಮಂಗಳವಾರ ಗದಗ-ಬೆಟಗೇರಿ ಜನರಲ್ ವರ್ಕ್ಸ್ ಹಾಗೂ ಹಮಾಲರ, ಚಕ್ಕಡಿಯವರ ಸಮಿತಿಯಿಂದ ರಾಷ್ಟ್ರಮಟ್ಟದ ಜಂಗಿ ನಿಕಾಲಿ ಕುಸ್ತಿಗೆ ಯುವ ಮುಖಂಡ ಕೃಷ್ಣಗೌಡ ಪಾಟೀಲ ಚಾಲನೆ ನೀಡಿದರು.

ಸಾನ್ನಿಧ್ಯವನ್ನು ಪೂಜ್ಯ ಕಲ್ಲಯ್ಯಜ್ಜನವರು ವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಬಿ.ಬಿ. ಅಸೂಟಿ, ಅಶೋಕ ಸಂಕಣ್ಣವರ, ಪ್ರಕಾಶ ಕರಿ, ವಸಂತ ಸಿದ್ದಮ್ಮನಹಳ್ಳಿ ಸೇರಿದಂತೆ ಹಮಾಲರ ಚಕ್ಕಡಿಯವರ ಸಮಿತಿಯ ಪದಾಧಿಕಾರಿಗಳು ಹಾಗೂ ದಲಾಲ ಅಂಗಡಿಯ ವರ್ತಕರು, ಖರೀದಿದಾರರ ಅಂಗಡಿ ವರ್ತಕರು, ಬ್ರೋಕರ್‌ದಾರರು ಪಾಲ್ಗೊಂಡಿದ್ದರು. ಕುಸ್ತಿ ನಿರ್ಣಾಯಕರಾಗಿ ಸುಭಾಸ ಸಂಗಪ್ಪ ಕಡಿಗೇರಿ, ಆದಪ್ಪ ಮಾರೆಪ್ಪನವರ, ಇಮಾಮಸಾಬ ರೋಣದ, ಅಮರಪ್ಪ ಕುಡಗುಂಟಿ ಪಾಲ್ಗೊಂಡಿದ್ದರು. ▸▸3ನೇ ಪುಟಕ್ಕೆ

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನಲ್ಲಿ ಗದಗ ಜಿಲ್ಲೆಯ ಜೈನ ಸಮುದಾಯದ ಬಸದಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಚಕರಿಗೆ ಗೌರವಧನ ನೀಡಲು ಮತ್ತು ಸಿಖ್ ಮುಖ್ಯ ಗ್ರಂಥಿಗಳು ಹಾಗೂ ಸಹಾಯಕ ಗ್ರಂಥಿಗಳಿಗೆ ಅವರ ದೈನಂದಿನ ಜೀವನ ನಿರ್ವಹಣೆಗೆ ಅನುಕೂಲವಾಗುವಂತೆ ಮಾಸಿಕ ಗೌರವಧನವನ್ನು ಹೆಚ್ಚಿಸಲಾಗಿದ್ದು, ಸದರಿ ಗೌರವಧನ ಪಡೆಯಲು ಅರ್ಹ ಅರ್ಚಕರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಸಂಬಂಧಿಸಿದ ಅರ್ಚಕರು ನಿಗದಿತ ನಮೂನೆಯಲ್ಲಿ ದಾಖಲೆಗಳೊಂದಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಕಚೇರಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇಲ್ಲಿ ದೂ: 08372–297494 ಸಂಪರ್ಕಿಸಬಹುದಾಗಿದೆ.

## ಜೂ. 24ರಂದು ನೇರ ಸಂದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ(ಕಭಿ) ಕಾರ್ಯಕ್ರಮದಡಿಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಗುತ್ತಿಗೆ ಆಧಾರದ ಮೇಲೆ ನ್ಯೂರಾಲಾಜಿಸ್ಟ್/ಫಿಜಿಷಿಯನ್/ವೈದ್ಯಕೀಯ ಅಧಿಕಾರಿ–01, ಶುಶ್ರೂಷಕರು–01, ಫಿಜಿಯೋಥೆರಪಿಸ್ಟ್–01, ಸ್ಪೀಚ್ ಥೆರಪಿಸ್ಟ್ –01, ಕ್ಲಿನಿಕಲ್ ಸೈಕಾಲಾಜಿಸ್ಟ್–01, ಜಿಲ್ಲಾ ಸಂಯೋಜಕರು–01 ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ಭರ್ತಿ ಮಾಡಲು ಜೂನ್ 24 ರಂದು ಬೆಳಿಗ್ಗೆ 10.30 ಘಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಕೊಠಡಿ ಸಂಖ್ಯೆ–101, ಜಿಲ್ಲಾಡಳಿತ ಭವನ ಗದಗದಲ್ಲಿ ಇಲ್ಲಿ ನೇರ ಸಂದರ್ಶನ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ವೆಬ್‌ಸೈಟ್: https://gadg.nic.in ನಲ್ಲಿ ವೀಕ್ಷಿಸಬಹುದು ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದ ಸಚಿವ ಮಧು ಬಂಗಾರಪ್ಪ**

## ಸರಕಾರಿ ಪ್ರೌಢಶಾಲೆಯ ಗೌರವ ಹೆಚ್ಚಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ಗದಗ ಶಹರದ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯನ್ನು ದತ್ತು ಪಡೆದ ಮೇಲೆ ಶಾಲೆಯ ಕಳೆ ಹೆಚ್ಚುವುದರ ಜೊತೆಗೆ ಅದರ ಗೌರವ, ಮಹತ್ವ ಸಹ ಹೆಚ್ಚಿದೆ ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅಭಿಪ್ರಾಯಪಟ್ಟರು.

ಅವರು ಬಳ್ಳಾರಿಯಲ್ಲಿ ನಡೆದ ಹೊರಟ್ಟಿಯವರ ಕುರಿತ ಸಾಕ್ಷ್ಯಚಿತ್ರ ಬಿಡುಗಡೆ ಸಮಾರಂಭದಲ್ಲಿ ಸಿದ್ದಲಿಂಗ ನಗರ ಸರ್ಕಾರಿ ಪ್ರೌಢಶಾಲೆಯ ದತ್ತು ಉಸ್ತುವಾರಿ ಡಾ. ಬಸವರಾಜ್ ಧಾರವಾಡ ಅವರಿಂದ ಶಾಲೆಯ ಕುರಿತ ಕಿರು ಪರಿಚಯವುಳ್ಳ ಕರಪತ್ರವನ್ನು ಸ್ವೀಕರಿಸಿ ಮಾತನಾಡಿದರು.



ಈಗಾಗಲೇ ಈ ಶಾಲೆಯ ಕುರಿತು ಸಾಕಷ್ಟು ಮಾಹಿತಿಗಳನ್ನ ಪಡೆದಿದ್ದೇನೆ. ಕೇವಲ ಎರಡು ವರ್ಷಗಳಲ್ಲಿ ಬಸವರಾಜ ಹೊರಟ್ಟಿ ಹಾಗೂ ಇನ್ನಿತರ ಜನಪ್ರತಿನಿಧಿಗಳು, ದಾನಿಗಳು ಹಾಗೂ ಸ್ಥಳೀಯ ನಗರಸಭೆಯ ಸಹಕಾರದಿಂದ ಸಾಕಷ್ಟು ಅಭಿವೃದ್ಧಿ ಹೊಂದಿರುವುದು ಖುಷಿ ತಂದಿದೆ. ಈ ಬಾರಿಯ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಫಲಿತಾಂಶ ದಾಖಲಿಸಿದೆ. ಈಗಾಗಲೇ ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ಸಾಕಷ್ಟು ಯೋಜನೆಗಳನ್ನು ರೂಪಿಸಿ ಕಾರ್ಯರೂಪಕ್ಕೆ ತಂದಿದ್ದೇವೆ ಎಂದರು.

ಯಾವ ವಿದ್ಯಾರ್ಥಿಯೂ ಶಿಕ್ಷಣದಿಂದ ವಂಚಿತರಾಗಬಾರದು ಶಾಲೆ ಬಿಟ್ಟ ಮಕ್ಕಳಿಗಾಗಿಯೇ ವಿಶೇಷ ಯೋಜನೆಯನ್ನು ತಂದಿದ್ದೇವೆ. ಗದಗ ಜಿಲ್ಲೆಯಲ್ಲಿ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ವಿಶೇಷ ▸▸3ನೇ ಪುಟಕ್ಕೆ

## ಸಂಪಾದಕೀಯ

# ಶಿಕ್ಷಣ ಕ್ಷೇತ್ರದ ಭರವಸೆಯ ಹೆಜ್ಜೆ: 13,000 ಶಿಕ್ಷಕರ ನೇಮಕಾತಿ

ಶಿಕ್ಷಕರ ನೇಮಕಾತಿ ಕುರಿತು ಸಚಿವ ಮಧು ಬಂಗಾರಪ್ಪ ನೀಡಿರುವ ಹೇಳಿಕೆ ಮತ್ತು ಶಾಲಾ ಪ್ರಾರಂಭಕ್ಕೆ ಮುನ್ನವೇ ಅತಿಥಿ ಶಿಕ್ಷಕರನ್ನು ನಿಯೋಜಿಸಿರುವ ಕ್ರಮವು ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಬಗ್ಗೆ ಸರ್ಕಾರಕ್ಕಿರುವ ಗಂಭೀರ ಕಾಳಜಿಯನ್ನು ಎತ್ತಿ ತೋರಿಸುತ್ತದೆ. ಇದು ಶಿಕ್ಷಣ ಕ್ಷೇತ್ರದ ದಶಕಗಳ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿರುವ ನಡೆಯಾಗಿದ್ದು, ನಿಜಕ್ಕೂ ಶ್ಲಾಘನೀಯ.

ವರ್ಷಗಳಿಂದ ರಾಜ್ಯದ ಸರ್ಕಾರಿ ಶಾಲೆಗಳು ಶಿಕ್ಷಕರ ಕೊರತೆಯಿಂದ ಬಳಲುತ್ತಿದ್ದವು.

ಇದು ವಿದ್ಯಾರ್ಥಿಗಳ ಕಲಿಕೆಯ ಮೇಲೆ ನೇರವಾಗಿ ಪರಿಣಾಮ ಬೀರುತ್ತಿತ್ತು. ಅನೇಕ ಶಾಲೆಗಳಲ್ಲಿ ಒಬ್ಬ ಶಿಕ್ಷಕರು ಒಂದಕ್ಕಿಂತ ಹೆಚ್ಚು ತರಗತಿಗಳನ್ನು ನಿಭಾಯಿಸಬೇಕಾದ ಪರಿಸ್ಥಿತಿ ಇತ್ತು. ಇದರಿಂದ ಪಠ್ಯಕ್ರಮದ ಕಲಿಕೆ ಕುಂಠಿತವಾಗುವುದರ ಜೊತೆಗೆ, ಮಕ್ಕಳ ಸಮಗ್ರ ಬೆಳವಣಿಗೆಗೂ ಅಡ್ಡಿಯಾಗುತ್ತಿತ್ತು.

ಈ ಹಿನ್ನೆಲೆಯಲ್ಲಿ 13,000 ಶಿಕ್ಷಕರ ನೇಮಕಾತಿ ಘೋಷಣೆ ಒಂದು ಮಹತ್ವದ ಬೆಳವಣಿಗೆಯಾಗಿದೆ. ಇದು ಸಾವಿರಾರು ನಿರುದ್ಯೋಗಿ ಯುವಜನರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದಲ್ಲದೆ, ರಾಜ್ಯದ ಮೂಲೆ ಮೂಲೆಯ ಶಾಲೆಗಳಿಗೆ ಸಮರ್ಥ ಶಿಕ್ಷಕರನ್ನು ಒದಗಿಸಿ ಕಲಿಕೆಯ ಗುಣಮಟ್ಟವನ್ನು ಸುಧಾರಿಸಲು ನೆರವಾಗಲಿದೆ.

ಇನ್ನು, ಈ ವರ್ಷ ಶಾಲಾ ಆರಂಭಕ್ಕೆ ಮುನ್ನವೇ ಅತಿಥಿ ಶಿಕ್ಷಕರನ್ನು ನೇಮಿಸಿರುವುದು ಸರ್ಕಾರದ ದೂರದೃಷ್ಟಿಯನ್ನು ಸೂಚಿಸುತ್ತದೆ.


ಸಾಮಾನ್ಯವಾಗಿ, ಅತಿಥಿ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಶಾಲಾ ಪ್ರಾರಂಭದ ನಂತರವೂ ವಿಳಂಬವಾಗಿ, ಪ್ರಾರಂಭಿಕ ದಿನಗಳಲ್ಲಿ ವಿದ್ಯಾರ್ಥಿಗಳು ಶಿಕ್ಷಕರಿಲ್ಲದೆ ಪರದಾಡುವ ಪರಿಸ್ಥಿತಿ ಇರುತ್ತಿತ್ತು.

ಆದರೆ, ಈ ಬಾರಿ ಪೂರ್ವಭಾವಿಯಾಗಿಯೇ ಈ ಕ್ರಮ ಕೈಗೊಂಡಿರುವುದು ವಿದ್ಯಾರ್ಥಿಗಳ ಕಲಿಕೆಗೆ ಯಾವುದೇ ಅಡ್ಡಿಯಾಗದಂತೆ ನೋಡಿಕೊಳ್ಳುವ ಸರ್ಕಾರದ ಬದ್ಧತೆಯನ್ನು ತೋರಿಸುತ್ತದೆ.

ಅತಿಥಿ ಶಿಕ್ಷಕರು ತಾತ್ಕಾಲಿಕವಾಗಿದ್ದರೂ, ಅವರು ಶೈಕ್ಷಣಿಕ ಪ್ರಕ್ರಿಯೆಯನ್ನು ಸುಗಮವಾಗಿ ನಡೆಸಿಕೊಂಡು ಹೋಗುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಈ ಮುಂಜಾಗ್ರತಾ ಕ್ರಮವು ಶೈಕ್ಷಣಿಕ ವರ್ಷದ ಮೊದಲ ದಿನದಿಂದಲೇ ಸುಗಮ ಕಲಿಕಾ ವಾತಾವರಣವನ್ನು ಸೃಷ್ಟಿಸಲು ಸಹಾಯಕವಾಗುತ್ತದೆ.

### ಮೌಲ್ಯಾಧಾರಿತ ಶಿಕ್ಷಣದ ಜೊತೆಗೆ ಸಂಸ್ಕಾರಯುತ ಶಿಕ್ಷಣ ನೀಡಲು ಒತ್ತಾಯ

# ಶಿಕ್ಷಣ ಸಚಿವರಿಗೆ ಹೊರಟ್ಟಿ ಪತ್ರ



ಜಗತ್ತಿನ ಶ್ರೇಷ್ಠ ದಾರ್ಶನಿಕರು, ದಕ್ಷಿಣಆಫ್ರಿಕಾದ ಪ್ರಧಾನಿಗಳಾದ ನೆಲ್ಸನ್ ಮಂಡೇಲಾರವರ ಪ್ರಕಾರ ಶಿಕ್ಷಣವು ಜಗತ್ತನ್ನು ಬದಲಾಯಿಸಬಹುದಾದ ಅತ್ಯಂತ ಶಕ್ತಿಶಾಲಿ ಅಸ್ತ್ರವಾಗಿದೆ. ಮಾನ್ಯರು ಶಿಕ್ಷಣವನ್ನು ಎರಡು ರೀತಿಯಲ್ಲಿ ವಿಶ್ಲೇಷಿಸಿದ್ದಾರೆ. ಅವುಗಳೆಂದರೆ ಶೈಕ್ಷಣಿಕ ಶಿಕ್ಷಣ ಮತ್ತು ಮೌಲ್ಯ ಶಿಕ್ಷಣ.

ಪ್ರತಿಯೊಬ್ಬ ವಿದ್ಯಾರ್ಥಿಗೂ ಔಪಚಾರಿಕ ಶಿಕ್ಷಣ (ತರಗತಿಯಲ್ಲಿ ಬೋಧಿಸುವ ವಿಷಯಗಳು)ದ ಜೊತೆಜೊತೆಗೆ ಅನೌಪಚಾರಿಕ ಶಿಕ್ಷಣ (ಪಠ್ಯವಸ್ತುವನ್ನು ಹೊರತುಪಡಿಸಿ ಅನುಭವದ ಮೂಲಕ ಕಲಿಕೆ) ಕೂಡ ಬಹಳ ಮುಖ್ಯ. ವಿದ್ಯಾರ್ಥಿ ಬರಿ ಪಠ್ಯವಸ್ತುವನ್ನು ಅರಿತುಕೊಂಡು ಜೀವನ ನಡೆಸಲು ಸಾಧ್ಯವಿಲ್ಲ. ಅದರ ಜೊತೆಗೆ ಸಾಮಾನ್ಯ ಜ್ಞಾನ ಕೂಡ ಬಹಳ ಮುಖ್ಯ. ಇದೇ ಕಾರಣಕ್ಕೆ ಪಠ್ಯವಸ್ತುವಿನ ಜೊತೆ ಸಹ ಪಠ್ಯವಸ್ತುಗಳಾದ ಶಾರೀರಿಕ ಶಿಕ್ಷಣ, ಚಿತ್ರಕಲೆ, ಸಂಗೀತ, ನಾಟಕ-ನೃತ್ಯ ಹಾಗೂ ವೃತ್ತಿಶಿಕ್ಷಣ, ಮೌಲ್ಯಶಿಕ್ಷಣ ಈ ಎಲ್ಲ ವಿಷಯಗಳಿಂದ ವಿದ್ಯಾರ್ಥಿಗಳು ತಮ್ಮ ವ್ಯಕ್ತಿತ್ವವನ್ನು ಪರಿಪೂರ್ಣವಾಗಿ ರೂಪಿಸಿಕೊಳ್ಳಲು ಸಹಾಯಕವಾಗುತ್ತದೆ.

ಪ್ರಸ್ತುತ ಜಗತ್ತನ್ನು ಮತ್ತು ನಾವು ಬಾಳಿ ಬದುಕಬೇಕಿರುವ ಸಮಾಜವನ್ನು ಸೂಕ್ಷ್ಮವಾಗಿ ಅವಲೋಕನ ಮಾಡಿದಾಗ ನಮ್ಮ ಗಮನಕ್ಕೆ ಬರುವುದು ಅನ್ಯಾಯ, ಕ್ರೌರ್ಯ, ಅಸಹನೆ, ದುರಾಚಾರ, ಹೊಂದಾಣಿಕೆ ಇಲ್ಲದಿರುವುದು ಹಾಗೂ ಇನ್ನಿತರ ಅಂಶಗಳು. ಇದಕ್ಕೆ ಮಕ್ಕಳಿಗೆ ನೀಡುತ್ತಿರುವ ಶಿಕ್ಷಣದಲ್ಲಿನ ಮೌಲ್ಯ ಶಿಕ್ಷಣದ ಕೊರತೆಯೇ ಮುಖ್ಯ ಕಾರಣ. ಮಕ್ಕಳಿಗೆ ಒಳ್ಳೆಯ ಆಚಾರ-ವಿಚಾರ, ಉತ್ತಮ ಸಂಸ್ಕಾರ ದೊರಯಬೇಕೆಂದರೆ ಮೌಲ್ಯ ಶಿಕ್ಷಣ ನೀಡುವುದು ಅವಶ್ಯಕ ಎನ್ನುವುದು ನನ್ನ ಅನಿಸಿಕೆ.

ಈ ಹಿಂದೆ ನಾವು ಅಭ್ಯಾಸ ಮಾಡುವ ಸಮಯದಲ್ಲಿ ಪಠ್ಯವಸ್ತುವಿನಲ್ಲಿ ನೀತಿ ಕಥೆಗಳಿರುತ್ತಿದ್ದವು. ಇದರಿಂದ ಮಕ್ಕಳು ಪ್ರಾಮಾಣಿಕತೆ, ಸಮಗ್ರತೆ, ಸಹಾನುಭೂತಿ, ದಯೆ, ನ್ಯಾಯಸಮ್ಮತೆ, ಸಾಮಾಜಿಕ ಮತ್ತು ಭಾವನಾತ್ಮಕ ಕೌಶಲ್ಯ, ಜವಾಬ್ದಾರಿ, ತಾಳ್ಮೆ, ಶಿಸ್ತು, ಭ್ರಾತೃತ್ವ, ಪರಸ್ಪರರನ್ನು ಗೌರವಿಸುವುದು, ಪರಸ್ಪರ ಹೊಂದಾಣಿಕೆ, ಕಠಿಣ ಪರಿಶ್ರಮ, ಕೃತಜ್ಞತೆ, ಪರಸ್ಪರ ಹಂಚಿಕೊಳ್ಳುವಿಕೆ, ಉದಾರತೆ, ಜವಾಬ್ದಾರಿ ತೆಗೆದುಕೊಳ್ಳುವುದು ಈ ಎಲ್ಲ ಅಂಶಗಳನ್ನು ಜೀವನದಲ್ಲಿ ರೂಢಿಸಿಕೊಂಡು ನಮ್ಮ ನಿಮ್ಮೆಲ್ಲ ಹಿರಿಯರು ಸಾತ್ವಿಕ ಹಾಗೂ ಆದರ್ಶ ಜೀವನವನ್ನು ನಡೆಸುತ್ತಿದ್ದರು.

ಆದರೆ ಈಗಿನ ಮಕ್ಕಳಲ್ಲಿ ಈ ಮೇಲ್ಕಾಣಿಸಿದ ಯಾವುದೇ ಅಂಶಗಳು ನಮಗೆ ಕಾಣಸಿಗುವುದಿಲ್ಲ. ಮೌಲ್ಯ ಶಿಕ್ಷಣದ ಕೊರತೆ ಹಾಗೂ ಅತ್ಯಾಧುನಿಕ ತಂತ್ರಜ್ಞಾನ ಬಳಕೆಯೇ ಇದಕ್ಕೆ ಮುಖ್ಯ ಕಾರಣ. ಮಕ್ಕಳು ಹೊಂದಾಣಿಕೆ ಜೀವನ ನಡೆಸದೆ ಸಮಾಜ ವಿರೋಧಿ ಕೆಲಸಗಳಲ್ಲಿ ಹಾಗೂ ಅನೇಕ ಕಾನೂನು ಬಾಹಿರ ಕೃತ್ಯಗಳಲ್ಲಿ ಭಾಗಿಯಾಗುತ್ತಿರುವುದನ್ನು ನಾವೆಲ್ಲ ಪ್ರತಿದಿನ ದಿನಪತ್ರಿಕೆಗಳಲ್ಲಿ, ದೃಶ್ಯ ಮಾಧ್ಯಮಗಳಲ್ಲಿ ನೋಡುತ್ತಿದ್ದೇವೆ. ಇಂದಿನ ಶಾಲೆಗಳು ತರಗತಿಯಲ್ಲಿ ಮತ್ತು ಸಾಮಾಜಿಕ ಪರಿಸರದಲ್ಲಿ ತಿಳಿಸಲಾದ ಮೌಲ್ಯಗಳು ಮತ್ತು ನಂಬಿಕೆಗಳನ್ನು ಒಳಗೊಂಡಿರುವ ಪಠ್ಯಕ್ರಮದ ಪರಿಕಲ್ಪನೆಯನ್ನು ಶಿಕ್ಷಣ ವ್ಯವಸ್ಥೆಯಲ್ಲಿ ಅಳವಡಿಸುವುದು ಇಂದಿನ ಅಗತ್ಯವಾಗಿದೆ. ಇದು ಔಪಚಾರಿಕ ಪಠ್ಯಕ್ರಮದ ಪಾಠ ಪ್ರವಚನಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ. ಆದರೆ ಪ್ರಸ್ತುತ ಶಿಕ್ಷಣ ವ್ಯವಸ್ಥೆ ಅದನ್ನು ನಿರ್ಲಕ್ಷಿಸಿ ಭಾಷೆ, ವಿಷಯಗಳು ಮತ್ತು ಅಂಕಗಳ ಮೇಲೆ ಹೆಚ್ಚು ಗಮನ ಹರಿಸುತ್ತಿದೆ.

ಮಕ್ಕಳ ಸರ್ವತೋಮುಖ ಅಭಿವೃದ್ಧಿಯಲ್ಲಿ ನಾಡಿನ ಮುಂದಿನ ಭವಿಷ್ಯ ಅಡಗಿರುತ್ತದೆ. ಇಂದಿನ ಹದಿಹರೆಯದ ಮಕ್ಕಳು ಎದುರಿಸುತ್ತಿರುವ ಸಮಸ್ಯೆಗಳು, ಮಕ್ಕಳ ಹಕ್ಕುಗಳ ರಕ್ಷಣೆ ಮತ್ತು ಮಕ್ಕಳು ವ್ಯಸನ ಮುಕ್ತರಾಗಲು ಅನೇಕ ನಿರ್ಣಯಗಳನ್ನು ಕೈಗೊಳ್ಳಲಾಯಿತು. ಈ ಸಂದರ್ಭದಲ್ಲಿ ಡಾ.ಧನಂಜಯ್ ಸರ್ಜಿ ಸೇರಿದಂತೆ ಅನೇಕ ಶಾಸಕರು ಬಹಳ ಉತ್ಸಾಹದಿಂದ ಸದರಿ ವಿಧಾನ ಪರಿಷತ್ತಿನ ಉಪವೇಶಗಳಲ್ಲಿ ಭಾಗವಹಿಸಿ ಮಕ್ಕಳ ಹಕ್ಕುಗಳ ರಕ್ಷಣೆ ಬಗ್ಗೆ ಸುದೀರ್ಘವಾಗಿ ಎರಡು ದಿನಗಳ ಕಾಲ ಅಧಿವೇಶನದಲ್ಲಿ ಚರ್ಚೆ ನಡೆಸಿದ್ದು ನಂತರ ಸದನವು ಅನೇಕ ಶಿಫಾರಸುಗಳನ್ನು ಮಾಡಿದೆ.

13.06.2025 ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಮತ್ತು ಚೈಲ್ಡ್ ಫಂಡ್ ಇಂಡಿಯಾ ಇವರ ಸಹಯೋಗದಲ್ಲಿ ಕರ್ನಾಟಕದ ಮಕ್ಕಳ ಆನ್‌ಲೈನ್ ಅಪಾಯಗಳ ಕುರಿತ ವಿಶೇಷ ಅಧ್ಯಯನದ ವರದಿಯ ಬಿಡುಗಡೆ ಸಭೆಯಲ್ಲಿ ಆನ್‌ಲೈನ್ ಮೂಲಕ ಶಿಕ್ಷಣ ಸರಿಯಾದ ಪದ್ಧತಿ ಅಲ್ಲ, ಒಟ್ಟಾರೆ ಎಲ್.ಕೆ.ಜಿಯಿಂದ ಪಿ.ಯು.ಸಿವರೆಗೆ ಆನ್‌ಲೈನ್ ಶಿಕ್ಷಣವನ್ನು ರದ್ದುಗೊಳಿಸುವ ಕುರಿತಂತೆ ಸಭೆಯಲ್ಲಿ ನಿರ್ಣಯಿಸಿದ್ದು, ಇದು ಒಂದು ವಿನೂತನ ಪ್ರಯೋಗವಾಗಿದೆ.

ಪ್ರಜಾಪ್ರಭುತ್ವ ರಾಷ್ಟ್ರವಾದ ಭಾರತದಲ್ಲಿ ಮೌಲ್ಯ ಶಿಕ್ಷಣದ ಮಹತ್ವವನ್ನು ಪ್ರಜಾಪ್ರಭುತ್ವ ಚಿಂತನೆಯ ಪರಿಕಲ್ಪನೆಯೊಂದಿಗೆ ಒತ್ತಿಹೇಳಲಾಗುತ್ತದೆ. ಶಾಲೆಗಳಲ್ಲಿ ನೈತಿಕತೆ ಮತ್ತು ಮೌಲ್ಯಗಳ ಬೋಧನೆಯ ನಿರ್ಣಾಯಕ ಪಾತ್ರವನ್ನುಅರ್ಥ ಮಾಡಿಕೊಂಡು ಉತ್ತಮ ವ್ಯಕ್ತಿತ್ವ ನಿರ್ಮಾಣದೊಂದಿಗೆ ಉತ್ತಮ ನಾಗರಿಕರನ್ನು ರೂಪಿಸುವ ನಿಟ್ಟಿನಲ್ಲಿ ಪ್ರಸ್ತುತ ಶಾಲಾ ಪಠ್ಯಕ್ರಮದಲ್ಲಿ ನೈತಿಕ ಶಿಕ್ಷಣ ಮತ್ತು ಮೌಲ್ಯ ಶಿಕ್ಷಣವನ್ನು ಅಳವಡಿಸುವ ಕುರಿತಂತೆ ಅಗತ್ಯ ಕ್ರಮವಹಿಸಲು ಸಭಾಪತಿ ಬಸವರಾಜ ಹೊರಟ್ಟಿ ಪತ್ರದಲ್ಲಿ ಕೋರಿದ್ದಾರೆ.

ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಲಕ್ಕುಂಡಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಶಾಖೆಯಲ್ಲಿ ಯೋಗಾಸನ ಶಿಬಿರ ಆರಂಭಿಸಲಾಯಿತು. ಶಿವ-ಪಾರ್ವತಿ ಯೋಗ ಫೌಂಡೇಶನ್ ಗದಗ, ಅನ್ನಪೂರ್ಣೇಶ್ವರಿ ಸತ್ಸಂಗ ಸಮಿತಿ ಲಕ್ಕುಂಡಿ ಇವರ ಸಂಯುಕ್ತ ಆಶ್ರಯದಲ್ಲಿ ಶಿಬಿರಕ್ಕೆ ಬಿ.ಕೆ. ಸರೋಜಕ್ಕ ಅವರು ಚಾಲನೆ ನೀಡಿದರು. ಜೂನ್ 21ರವರೆಗೆ ನಡೆಯುವ ಯೋಗ ಶಿಬಿರವನ್ನು ಯೋಗ ಸಾಧಕ ಸಿದ್ದಣ್ಣ ಜವಳಿ ನಡೆಸಿಕೊಡಲಿದ್ದು, ಆಸಕ್ತರು ಭಾಗವಹಿಸಬೇಕೆಂದು ಬಿ.ಕೆ. ಸರೋಜಕ್ಕ ವಿನಂತಿಸಿದರು.



### ಉಭಯ ಶ್ರೀಗಳ ಜಾತ್ರಾ ಮಹೋತ್ಸವದ ನಿಮಿತ್ತ ಅನ್ನಸಂತರ್ಪಣೆ

# ಪುಣ್ಯಾಶ್ರಮ ರಾಷ್ಟ್ರ ಮಟ್ಟದಲ್ಲಿ ಹೆಸರಾಗಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಜನತಾ ಬಜಾರದ ಪೂಜ್ಯ ಶ್ರೀ ಕಲ್ಲಯ್ಯಜ್ಜ ಯುವಕ ಮಂಡಳದ ವತಿಯಿಂದ ಪರಮಪೂಜ್ಯ ಗಾನಯೋಗಿ ಶಿವಯೋಗಿ ಪಂಡಿತ ಶ್ರೀ ಪಂಚಾಕ್ಷರಿ ಗವಾಯಿಗಳರವರ 81ನೇ ಹಾಗೂ ಪಂಡಿತ ಶ್ರೀ ಪುಟ್ಟರಾಜ ಗವಾಯಿಗಳರವರ 15ನೇ ಪುಣ್ಯಸ್ಮರಣೋತ್ಸವದ ನಿಮಿತ್ತ ಸೋಮವಾರ ಮಹಾಪೂಜೆ ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮ ನಗರದ ಜನತಾ ಬಜಾರದಲ್ಲಿ ಜರುಗಿತು.

ಕಾರ್ಯಕ್ರಮವನ್ನುದ್ದೇಶಿಸಿ ಭಾಷಾಸಾಬ ಮಲ್ಲಸಮುದ್ರ ಮಾತನಾಡಿ, ವೀರೇಶ್ವರ ಪುಣ್ಯಾಶ್ರಮ ಶಿಕ್ಷಣ ದಾಸೋಹ, ಸಂಗೀತ ದಾಸೋಹ, ಅನ್ನದಾಸೋಹ ನಡೆಸುವುದರ ಮೂಲಕ ರಾಷ್ಟ್ರಮಟ್ಟದಲ್ಲಿ ಹೆಸರಾಗಿದೆ ಎಂದರು.

ನಗರ ಪೊಲೀಸ್ ಠಾಣೆಯ ಸಿಪಿಐ ಬಿ.ಬಿ. ಪಾಟೀಲ ಮಾತನಾಡಿ, ಪಂಡಿತ ಪಂಚಾಕ್ಷರ ಗವಾಯಿಗಳರವರ ಕೃಪೆ ಹಾಗೂ ಪುಟ್ಟರಾಜ ಗವಾಯಿಗಳರವರ ಆಶೀರ್ವಾದ ಸದಾಕಾಲ ನೆಮ್ಮಲ್ಲರ ಮೇಲೆ ಇರಲಿ ಎಂದು ಹೇಳಿದರು.

ಮುಖ್ಯಮಂತ್ರಿಗಳ ಪದಕ ವಿಜೇತ ಪೊಲೀಸ್ ಸಿಬ್ಬಂದಿಗಳಾದ ಆನಂದಸಿಂಗ ದೊಡ್ಡಮನಿ, ಪ್ರವೀಣ ಕಲ್ಲೂರ, ಬಸವರಾಜ ಗುಡ್ಲಾನವರ ಹಾಗೂ ಕಪ್ಪತ್ತನವರ ಇವರನ್ನು ಗೌರವಿಸಿ ಸನ್ಮಾನಿಸಲಾಯಿತು.

ಮುಖ್ಯ ಅತಿಥಿಗಳಾಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಬರ್ಚಿ, ಜಿ.ಜಿ. ಮೇರವಾಡೆ, ಶಹರ ಪೊಲೀಸ್ ಠಾಣೆ ಸಿಪಿಐ ಡಿ.ಬಿ. ಪಾಟೀಲ, ರಾಷ್ಟ್ರ ಪ್ರಶಸ್ತಿ ವಿಜೇತರಾದ ಎಸ್.ಎನ್. ಬಳ್ಳಾರಿ, ಮಾರುತಿ ಸೋಳಂಕಿ, ಮಹಮ್ಮದಅಲಿ ಅತ್ತಾರ, ಚಂದ್ರು ಮೇಲಿನಮನಿ, ಉಮರ ಫಾರೂಕ ಹುಬ್ಬಳ್ಳಿ ಮುಂತಾದವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸಮಿತಿಯ ಅಧ್ಯಕ್ಷರಾದ ರಾಜು ಡಿ.ರೋಣ, ಉಪಾಧ್ಯಕ್ಷರಾದ ರಾಮಣ್ಣ ಎನ್.ಗುರುಜಾಲಕರ, ಕಾರ್ಯದರ್ಶಿ ರಾಘವೇಂದ್ರ ವಿ.ಖೋಡೆ, ಸಹ-ಕಾರ್ಯದರ್ಶಿ ಚನ್ನಪ್ಪ ಗ.ಸಂಗಮ, ಖಜಾಂಚಿ ಗಣೇಶ ಎ.ಪಾಟೀಲ, ಸದಸ್ಯರಾದ ಈರಣ್ಣ ತಿಪ್ಪಶೆಟ್ಟಿ, ಕಾಶೀನಾಥ ಎನ್.ಕಬಾಡಿ, ನಿಂಗಪ್ಪ ಮಾಗಡಿ, ಗುಡೆಲಿಸಾಬ ಅತ್ತಾರ, ರೇವಣಪ್ಪ ರಾಜೂರ, ರಾಜೇಸಾಬ ಸಯ್ಯದ, ಮಂಜುನಾಥ ಕಾಟವಾ, ರಾಜೀವ ರೋಣದ, ರಾಮಣ್ಣ, ಗಣೇಶ, ರಾಘವೇಂದ್ರ, ಈರಣ್ಣ, ಬುಡೇಲಿ ಅತ್ತಾರ, ಕಾಶೀನಾಥ ಕಬಾಡಿ, ಚನ್ನಪ್ಪ ಸೇರಿದಂತೆ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.


ಭಾಷಾಸಾಬ ಮಲ್ಲಸಮುದ್ರ ನಿರೂಪಿಸಿದರು. ರಾಮಣ್ಣನವರು ವಂದಿಸಿದರು.

### ಡಾ. ಎನ್.ವಿ. ಬದಿ ಎಜ್ಯುಕೇಶನಲ್ ಚಾರಿಟೇಬಲ್ ಟ್ರಸ್ಟ್‌ನಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ

# ಕಷ್ಟಪಟ್ಟು ಓದಿದರೆ ಉಜ್ವಲ ಭವಿಷ್ಯವಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ವ್ಯಕ್ತಿಯ ವ್ಯಕ್ತಿತ್ವ ನಿರ್ಮಾಣದಲ್ಲಿ ಶಿಕ್ಷಣವು ಬಹುಮುಖ್ಯ ಪಾತ್ರ ವಹಿಸುತ್ತದೆ. ಪ್ರತಿಯೊಂದು ಸಮಸ್ಯೆಗೆ ಶಿಕ್ಷಣವು ಕೀಲಿಕೈ ಇದ್ದಂತೆ. ಹೀಗಾಗಿ ವಿದ್ಯಾರ್ಥಿಗಳು ಕಷ್ಟಪಟ್ಟು ಓದಿದರೆ ಮುಂದೆ ಜೀವನದಲ್ಲಿ ಇಷ್ಟ ಬಂದಂತೆ ಬದುಕಬಹುದು ಎಂದು ಬೆಂಗಳೂರಿನ ಚಾರ್ಟರ್ಡ್ ಅಕೌಂಟಂಟ್ ಆದ ಪರಶುರಾಮಸಾ ಟಿ.ಮಿಸ್ಕಿನ್ ಹೇಳಿದರು.



ಅವರು ಬೆಟಗೇರಿಯ ಎಸ್.ಎಸ್.ಕೆ ಸಮಾಜದ ಆಶ್ರಯದಲ್ಲಿ ಡಾ. ವಿ.ಎನ್. ಬದಿ ಎಜ್ಯುಕೇಶನಲ್ ಚಾರಿಟೇಬಲ್ ಟ್ರಸ್ಟ್ ಬೆಂಗಳೂರು ವತಿಯಿಂದ ಗದಗ ಜಿಲ್ಲಾ ಎಸ್.ಎಸ್.ಕೆ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಹಾಗೂ 'ಆರೋಗ್ಯ ಸರಳ ಸಂರಕ್ಷಕ' ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.

ದೂರದ ಅಮೆರಿಕಾದಲ್ಲಿದ್ದರೂ ಡಾ. ಎನ್.ವಿ. ಬದಿಯವರು ತಮ್ಮ ತವರು ಜಿಲ್ಲೆಯ ಎಸ್.ಎಸ್.ಕೆ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವ ಮೂಲಕ ಸಹಾಯ ಮಾಡುತ್ತಿದ್ದಾರೆ. ವಿದ್ಯಾರ್ಥಿಗಳು ಉತ್ತಮ ಅಂಕ ಗಳಿಸುವುದರೊಂದಿಗೆ ಅವರ ಕೊಡುಗೆಯನ್ನು ಸದುಪಯೋಗಪಡಿಸಿಕೊಳ್ಳಬೇಕೆಂದರು.

ಹುಬ್ಬಳ್ಳಿಯ ಡಾ. ರಮೇಶ ಬುರಬುರೆ ಮಾತನಾಡಿ, ಶಿಕ್ಷಣವು ಅಜ್ಞಾನವನ್ನು ಹೋಗಲಾಡಿಸಿ ಉಜ್ವಲ ಭವಿಷ್ಯ ನಿರ್ಮಿಸಿಕೊಳ್ಳುವಲ್ಲಿ ಸಹಾಯ ಮಾಡುತ್ತದೆ. ಹೀಗಾಗಿ ಪ್ರತಿಯೊಬ್ಬ ವಿದ್ಯಾರ್ಥಿಯು ಶ್ರಮವಹಿಸಿ ಓದಬೇಕೆಂದರು.

ಬೆಂಗಳೂರಿನ ಚಾರ್ಟರ್ಡ್ ಅಕೌಂಟಂಟ್ ಶಂಕರ ಲದವಾ ಅವರು ಮಾತನಾಡಿ, ಯಾವುದೇ ಸಮಾಜ ಶೈಕ್ಷಣಿಕವಾಗಿ ಅಭಿವೃದ್ಧಿಯಾದಾಗ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯವಾಗುತ್ತದೆ. ಎಸ್.ಎಸ್.ಕೆ ಸಮಾಜ ಈಗ ಶೈಕ್ಷಣಿಕ ಕ್ಷೇತ್ರದಲ್ಲಿಯೂ ಪ್ರಗತಿ ಸಾಧಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಹುಬ್ಬಳ್ಳಿಯ ಗೃಹ ವೈಭವದ ಮಾಲಕರಾದ ವಿಷ್ಣುಸಾ ಟಿ. ಬದಿಯವರು ಕೃಷ್ಣಾಸಾ ಆರ್. ಖಟವಟೆ ಸಂಪಾದಿತ 'ಆರೋಗ್ಯ ಸರಳ ಸಂರಕ್ಷಕ' ಕೃತಿ ಬಿಡುಗಡೆ ಮಾಡಿದರು. ಡಾ. ಎನ್.ವಿ. ಬದಿ ಇವರ ಸಹೋದರ ಮನೋಹರ ಬದಿ, ಚೈತನ್ಯ ಆಫ್‌ಸೆಟ್ ಮಾಲಕರಾದ ಅಶೋಕ ಕೆ.ಖಟವಟೆ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬೆಟಗೇರಿ ಎಸ್.ಎಸ್.ಕೆ ಸಮಾಜದ ಪಂಚ ಟ್ರಸ್ಟ್ ಕಮಿಟಿ ಅಧ್ಯಕ್ಷ ಲೋಕನಾಥ ಬಿ.ಕಬಾಡಿ ಮಾತನಾಡಿದರು. ಈ ಸಂದರ್ಭದಲ್ಲಿ ಕೃಷ್ಣಾಸಾ ಆರ್. ಖಟವಟೆ ಹಾಗೂ ಬೆಟಗೇರಿ ಎಸ್.ಎಸ್.ಕೆ ಸಮಾಜಕ್ಕೆ 51 ಸಾವಿರ ರೂ ದೇಣಿಗೆ ನೀಡಿದ ಕೊಪ್ಪಳ-ಭಾಗ್ಯನಗರದ ಹಿರಿಯ ಉದ್ಯಮಿ ಅರ್ಜುನಸಾ ಅಂತಾಳಮರದ ಅವರನ್ನು ಸನ್ಮಾನಿಸಲಾಯಿತು. ಗದಗ ಜಿಲ್ಲಾ ಎಸ್.ಎಸ್.ಕೆ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ವೇದಿಕೆಯ ಮೇಲೆ ಬೆಟಗೇರಿ ಎಸ್.ಎಸ್.ಕೆ ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ಚೇರಮನ್ ಜಿ.ವಿ. ಬಸವಾ, ತರುಣ ಸಂಘದ ಅಧ್ಯಕ್ಷ ಎಸ್.ಬಿ. ರಾಯಬಾಗಿ, ಬೆಟಗೇರಿ ಶ್ರೀ ಜಗದಂಬಾ ಮಹಿಳಾ ಮಂಡಳದ ಅಧ್ಯಕ್ಷರಾದ ಸರೋಜಾಬಾಯಿ ಎಚ್.ಕಬಾಡಿ ಉಪಸ್ಥಿತರಿದ್ದರು.

ಜಗದಂಬಾ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಬೆಟಗೇರಿ ಎಸ್.ಎಸ್.ಕೆ ಪಂಚ ಟ್ರಸ್ಟ್ ಕಮಿಟಿಯ ಉಪಾಧ್ಯಕ್ಷ ದತ್ತು ಪವಾರ ಸ್ವಾಗತಿಸಿದರು. ಸಹ ಶಿಕ್ಷಕರಾದ ಗಣಪತಿ ಹೆಗಡೆ ನಿರೂಪಿಸಿದರು. ಸತ್ಯನಾರಾಯಣ ಕಬಾಡಿ ವಂದಿಸಿದರು.

# ಡೇ ಕೇರ್ ಕಿಮೋಥೆರಪಿ ಕೇಂದ್ರ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲಾ ಆಸ್ಪತ್ರೆಯಲ್ಲಿ ಡೇ ಕೇರ್ ಕಿಮೋಥೆರಪಿ ಕೇಂದ್ರವನ್ನು ಸೋಮವಾರ ಸಂಜೆ ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್, ಜಿಲ್ಲಾಧಿಕಾರಿ ದಿವ್ಯ ಪ್ರಭು ಮತ್ತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಅವರು ಮಾತನಾಡಿ, ಧಾರವಾಡ ಜಿಲ್ಲಾ ಆಸ್ಪತ್ರೆಯಲ್ಲಿ ಡೇ ಕೇರ್ ಕಿಮೋಥೆರಪಿ ಕೇಂದ್ರವನ್ನು ಎ.ಬಿ.ಎ.ಆರ್.ಕೆ ಯೋಜನೆ ಅಡಿಯಲ್ಲಿ HCG Hospital, Hubballi ಯೊಂದಿಗೆ ಒಡಂಬಡಿಕೆಯೊಂದಿಗೆ ಪ್ರತಿಯೊಂದು ರೋಗಿಗಳಿಗೆ 1ನೇ ಸೈಕಲ್ ಚಿಕಿತ್ಸೆಯನ್ನು ಮಾಡಿಕೊಂಡವರಿಗೆ ಮುಂದಿನ ಸೈಕಲ್‌ನ್ನು Medical Oncologist ಅವರ ಅಭಿಪ್ರಾಯ ಹಾಗೂ ಸಲಹೆಯಂತೆ ಚಿಕಿತ್ಸೆಗೆ ಪ್ರತಿ ಬುಧವಾರ ಕ್ಯಾನ್ಸರ್ ರೋಗದ ತಜ್ಞವೈದ್ಯರಿಂದ ರೋಗಿಗಳನ್ನು ಜಿಲ್ಲಾ ಆಸ್ಪತ್ರೆಯಲ್ಲಿಯೇ ಪರೀಕ್ಷಿಸಲಾಗುವುದು. ಇದರಿಂದ 2024-2025ನೇ ಸಾಲಿನ 242 ರೋಗಿಗಳನ್ನು ಕ್ಯಾನ್ಸರ್ ಚಿಕಿತ್ಸೆಗೆ ಕಳುಹಿಸಲಾಗಿದೆ.

ಇಲ್ಲಿ ಚಿಕಿತ್ಸೆ ಸಿಗುವುದರಿಂದ ದೂರದ ಊರಿನ ಸಾರ್ವಜನಿಕರಿಗೆ ಅನುಕೂಲವಾಗುವುದು. ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದರು.

ಕಾರ್ಯಕ್ರಮದಲ್ಲಿ ಆಸ್ಪತ್ರೆಯ ಮುಖ್ಯಸ್ಥ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಸಂಗಪ್ಪ ಎನ್.ಗಾಬಿ, ಸ್ಥಳೀಯ ವೈದ್ಯಾಧಿಕಾರಿ ಡಾ. ಗಿರಿಜಾತಾಯಿ ಜಿ.ಹೆಚ್, ಹಿರಿಯ ತಜ್ಞವೈದ್ಯರುಗಳಾದ ಡಾ. ಮಯೂರ ಕದಂ ಮತ್ತು ಡಾ. ಎಸ್.ಎಮ್. ಸಾಂಬ್ರಾಣಿ, ಶುಶ್ರೂಷಾ ಅಧೀಕ್ಷಕ ವಿಜಯಕುಮಾರ ಮಳಗಿ, ಕಛೇರಿ ಅಧೀಕ್ಷಕ ವಾಯ್.ಹೆಚ್. ಬನಸೋಡೆ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

# ರಕ್ತದಾನ ರೋಗಿಯ ಪಾಲಿಗೆ ಸಂಜೀವಿನಿ: ಡಾ. ಬಸವರಾಜ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಮಹಿಳೆಯರ ಹೆರಿಗೆ, ಅಪಘಾತ ಸೇರಿದಂತೆ ರಕ್ತಹೀನತೆಯಿಂದ ಬಳಲುತ್ತಿರುವ ರೋಗಿಗಳ ಪಾಲಿಗೆ ಹನಿ ರಕ್ತವೂ ಸಹ ಸಂಜೀವಿನಿಯಾಗಿರುವುದರಿಂದ ಆರೋಗ್ಯವಂತ ಯುವಕರು ರಕ್ತದಾನ ಮಾಡುವ ಮೂಲಕ ರೋಗಿಗಳ ಪಾಲಿಗೆ ಆಸರೆಯಾಗಬೇಕಾದ ಅಗತ್ಯವಿದೆ ಎಂದು ಡಾ. ಬಸವರಾಜ ಅಭಿಪ್ರಾಯಪಟ್ಟರು.



ತಾಲೂಕಿನ ಅಣಜಿಗೆರೆ ಗ್ರಾಮದಲ್ಲಿ ವಿಜಯನಗರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪುಣಭಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಹೊಸಪೇಟೆಯ ಶ್ರೀಮತಿ ವಾಸುದೇವಭಟ್ ರಕ್ತದಾನ ಕೇಂದ್ರ ಇವರ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಸ್ವಯಂಪ್ರೇರಿತ ರಕ್ತದಾನ ಶಿಬಿರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ವಿಜ್ಞಾನ ತಂತ್ರಜ್ಞಾನದ ಆವಿಷ್ಕಾರಗಳು ಎಷ್ಟೇ ಪ್ರಮಾಣದಲ್ಲಿ ಮುಂದುವರೆದಿದ್ದರೂ ಸಹ, ರಕ್ತವನ್ನು ಕೃತಕವಾಗಿ ತಯಾರಿಸಲು ಅಸಾಧ್ಯವಾಗಿದೆ. ಹೀಗಾಗಿ, ಮನುಷ್ಯ-ಮನುಷ್ಯನಿಗೆ ನೆರವಾಗಬೇಕಾಗಿದೆ. ರಕ್ತಹೀನತೆಯಿಂದ ಬಳಲುವ ಮೂಲಕ ಸಾವು- ಬದುಕಿನ ನಡುವೆ ಹೋರಾಟ ನಡೆಸುತ್ತಿರುವ ರೋಗಿಗಳಿಗೆ ರಕ್ತದ ಅಗತ್ಯತೆ ಇರುತ್ತದೆ.. ಹೀಗಾಗಿ, ಆರೋಗ್ಯವಂತ ಯುವಕರು ರಕ್ತದಾನ ಮಾಡುವ ಮೂಲಕ ರಕ್ತಹೀನತೆಯಿಂದ ಬಳಲುವ ರೋಗಿಗೆ ಪುನರ್ಜನ್ಮ ಕೊಡಲು ಮುಂದಾಗಬೇಕು ಎಂದು ಕರೆ ನೀಡಿದರು.

ರಕ್ತದಾನ ಕುರಿತಂತೆ ನಮ್ಮ ನಡುವೆ ಅನೇಕ ಮೂಢನಂಬಿಕೆಗಳು ಮನೆ ಮಾಡಿವೆ. ಆದರೆ, ಅಂಥಹ ಮೂಢನಂಬಿಕೆಗಳನ್ನು ತೊರೆಯುವ ಮೂಲಕ 18ರಿಂದ 40ವರ್ಷದ ವಯೋಮಾನದವರೆಗಿನ ಎಲ್ಲಾ ಆರೋಗ್ಯವಂತ ಯುವಕರು ರಕ್ತದಾನ ಮಾಡಬಹುದು. ಜತೆಗೆ, ರಕ್ತದಾನವನ್ನು ಆಗಾಗ್ಗೆ ಮಾಡುವುದರಿಂದ ನಮ್ಮ ದೇಹದಲ್ಲಿ ಹೊಸ ರಕ್ತ ಉತ್ಪತ್ತಿಯಾಗುವ ಮೂಲಕ ನಾವು ಸಹ ಆರೋಗ್ಯವಂತರಾಗಿರಲು ಸಾಧ್ಯ. ರಕ್ತದಾನ ಮಾಡುವುದರಿಂದ ಹೃದಯಾಘಾತದಂತ ಕಾಯಿಲೆಗಳನ್ನು ನಾವು ತಡೆಯಲು ಸಾಧ್ಯ ಎಂದು ಡಾ. ಬಸವರಾಜ ಅವರು ತಿಳಿಸಿದರು.

ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಉಮೇಶ್ ತಾಳಿಕಟ್ಟೆ ಅವರು ಮಾತನಾಡಿ, ಎಲ್ಲಾ ದಾನಗಳಿಗಿಂತಲೂ ರಕ್ತದಾನ ಅತ್ಯಂತ ಶ್ರೇಷ್ಠದಾನವಾಗಿದೆ. ಅನ್ನದಾನ ಸೇರಿದಂತೆ ಇತರೆ ದಾನಗಳು ಆ ಕ್ಷಣದ ಸಂತೃಪ್ತಿಯನ್ನು ನೀಡಿದರೆ, ರಕ್ತದಾನ ಎಂಬ ಈ ಮಹಾದಾನ ರಕ್ತಹೀನತೆಯ ರೋಗಿಯ ಪಾಲಿಗೆ ಪುನರ್ಜನ್ಮ ನೀಡುತ್ತದೆ. ಹೀಗಾಗಿ, ರಕ್ತದಾನ ಮಾಡಲು ಯುವಕರು ಮುಂದಾಗಬೇಕು ಎಂದು ಕರೆ ನೀಡಿದರು.

ಗ್ರಾಮ ಪಂಚಾಯ್ತಿ ಅಧ್ಯಕ್ಷೆ ಗೀತಾ ಚಂದ್ರಪ್ಪ, ಮುಖಂಡರಾದ ಕಾರಿಹಳ್ಳಿ ಮಂಜಪ್ಪ, ಉಮೇಶ್ ಪಾಟೀಲ್, ಆರೋಗ್ಯ ಇಲಾಖೆಯ ಎಂ.ಆರ್. ನಾಗರಾಜ, ಸಿಬ್ಬಂದಿ ಉಷಾ, ಕೃಷ್ಣಮ್ಮ, ಸಂತೋಷ್, ಸುಧಾ, ಕಲ್ಲಮ್ಮ ಸಬೀನಾಬಾನು, ಕೆ. ಸುಧಾ ಹಾಗೂ ಆಶಾ ಕಾರ್ಯಕರ್ತೆಯರು ಈ ಸಂದರ್ಭದಲ್ಲಿ ಹಾಜರಿದ್ದರು.

ಶಿಬಿರದಲ್ಲಿ 13ಜನ ಯುವಕರು ರಕ್ತದಾನ ಮಾಡಿದರು.

# ರಾಷ್ಟ್ರಮಟ್ಟದ ಜಂಗಿ ನಿಕಾಲಿ ಕುಸ್ತಿಗೆ ಮುಖಂಡ ಕೃಷ್ಣಗೌಡ ಪಾಟೀಲ ಚಾಲನೆ

▸▸ಮೊದಲನೇ ಪುಟದಿಂದ

ಸಂಘದ ಸದಸ್ಯರುಗಳಾದ ಅಯ್ಯಪ್ಪ ನಾಯ್ಕರ, ಮಹಮ್ಮದಸಾಬ ವಾಲೇಕರ, ಇಮಾಮಸಾಬ ರೋಣದ, ಗೋವಿಂದಪ್ಪ ಮುಂಡರಗಿ, ರಾಮಣ್ಣ ವಾಲ್ಮೀಕಿ, ಯಲ್ಲಪ್ಪ ಗೊಂದಿ, ರವಿ ರಾಯರದೊಡ್ಡಿ, ಮಕ್ತುಮಸಾಬ ನಾಗನೂರ, ರಂಗಪ್ಪ ಯರಗುಡಿ, ಬಸವರಾಜ ಸೂಡಿ, ಮಾರುತಿ ರಾಯರದೊಡ್ಡಿ, ದೇವರಾಜ ಬಿನ್ನಾಳ, ಯಲ್ಲಪ್ಪ ಬೇವಿನಮರದ, ಬಸವರಾಜ ಬೇವಿನಮರದ, ಸುಭಾಸ ಕಟಗೇರಿ, ಇಮಾಮಸಾಬ ರೋಣದ, ಅಯ್ಯಪ್ಪ ನಾಯ್ಕರ, ರಾಮಣ್ಣ ವಾಲ್ಮೀಕಿ, ಗೋವಿಂದಪ್ಪ ಮುಂಡರಗಿ, ಬಸಣ್ಣ ಸೂಡಿ, ಮಾಬುಸಾಬ ವಾಲಿಕಾರ, ಮಾರುತಿ ರಾಲದೊಡ್ಡಿ, ದೇವರಾಜ ಬಿನ್ನಾಳ, ಯಲ್ಲಪ್ಪ ಬೇವಿನಮರದ, ರವಿ ರಾಲದೊಡ್ಡಿ, ವಸಂತ ಸಿದ್ದಮ್ಮನಹಳ್ಳಿ, ದೇವಪ್ಪ ಗಡಾದ, ಅಮರಪ್ಪ ಗುಡಗುಂದಿ, ಸೋಮನಾಥ ಹಾತಲಗೇರಿ, ದೇವಪ್ಪ ಕನ್ಯಾಳ, ಅಮೀನಸಾಬ ಅಣ್ಣೀಗೇರಿ, ಅಲ್ಲಾಸಾಬ ನದಾಫ್, ರಾಮಚಂದ್ರ ಹರಿಜನ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಸರಕಾರಿ ಪ್ರೌಢಶಾಲೆಯ ಗೌರವ ಹೆಚ್ಚಿದೆ

▸▸ಮೊದಲನೇ ಪುಟದಿಂದ

ಆಸಕ್ತಿ ವಹಿಸಿ ಶಾಲೆಯಿಂದ ಹೊರಗುಳಿದ ವಿದ್ಯಾರ್ಥಿಗಳನ್ನು ದಾಖಲಿಸುವ ಕಾರ್ಯಕ್ರಮಕ್ಕೆ ಕೈಜೋಡಿಸಿ ತಮ್ಮದೇ ಆದ ವಿಶೇಷ ಯೋಜನೆಯನ್ನು ರೂಪಿಸಿ ಶಾಲೆಯಿಂದ ಹೊರಗುಳಿದ ಮಕ್ಕಳ ಮನೆಗೆ ಖುದ್ದಾಗಿ ಭೇಟಿ ನೀಡಿ 'ಭವ್ಯ ಭವಿಷ್ಯಕ್ಕಾಗಿ ನಾಳೆಗೆ ಬನ್ನಿ ಬನ್ನಿ ಶಾಲೆಗೆ' ಎಂಬ ಅಭಿಯಾನ ಆರಂಭಿಸಿ ತಮ್ಮ ಕಾರಿನಲ್ಲಿ ವಿದ್ಯಾರ್ಥಿಗಳನ್ನು ಶಾಲೆಯವರೆಗೆ ಕರೆದುಕೊಂಡು ಬಂದಿರುವ ಕಾರ್ಯಕ್ರಮ ಶ್ಲಾಘನೀಯ ಮತ್ತು ಮಾದರಿಯಾಗಿದೆ ಎಂದರು.

## ಉಭಯ ಶ್ರೀಗಳ ಜಾತ್ರಾ ಮಹೋತ್ಸವದ ಧರ್ಮೋತ್ತೇಜಕ ಮಹಾಸಭೆಯಲ್ಲಿ ಮೂರುಸಾವಿರ ಮಠದ ಶ್ರೀಗಳು

# ಉಭಯ ಶ್ರೀಗಳು ಗಂಧರ್ವ ಲೋಕದ ದೇವತೆಗಳು




■ವಿಜಯಸಾಕ್ಷಿ ಸುದ್ದಿ, ಗದಗ

ಲಿಂ. ಪಂ. ಪಂಚಾಕ್ಷರಿ ಗವಾಯಿಗಳು ಹಾಗೂ ಲಿಂ. ಪಂ. ಪುಟ್ಟರಾಜ ಕವಿ ಗವಾಯಿಗಳವರು ಹಾನಗಲ್ ಕುಮಾರೇಶ್ವರ ಶ್ರೀಗಳ ತಪಸ್ಸಿನ ಫಲವಾಗಿ ಭೂಲೋಕಕ್ಕೆ ಬಂದಿದ್ದಾರೆ ಎಂದು ಹುಬ್ಬಳ್ಳಿಯ ಮೂರುಸಾವಿರ ಮಠದ ಪೂಜ್ಯಶ್ರೀ ಜ. ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮಿಗಳು ನುಡಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 81ನೇ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಜರುಗಿದ ಮಹಾರಥೋತ್ಸವ ಹಾಗೂ ಧರ್ಮೋತ್ತೇಜಕ ಮಹಾಸಭೆಯ ಸಾನ್ನಿಧ್ಯ ವಹಿಸಿ ಅವರು ಮಾತನಾಡುತ್ತಿದ್ದರು.

ತನಗಿಂತ ತನ್ನ ಶಿಷ್ಯರು ದೊಡ್ಡರಾಗಬಾರದೆಂದು ರಹಸ್ಯವನ್ನು ಕಲಿಸಿಕೊಡದ ಹಲವಾರು ಗುರುಗಳು ಇದ್ದಾರೆ. ಆದರೆ, ತಮ್ಮ ಶಿಷ್ಯರು ತಮಗಿಂತ ಹೆಚ್ಚು ಬೆಳೆಯಲಿ ಎಂದು ಬದುಕಿದವರು ಉಭಯ ಶ್ರೀಗಳು. ವೀರೇಶ್ವರ ಪುಣ್ಯಾಶ್ರಮ ಹಣ ಮಾಡುವ ಸಂಸ್ಥೆಯಲ್ಲ, ಸೇವೆ ಮಾಡುವ ಸಂಸ್ಥೆಯಾಗಿದೆ. ಲೋಕದ ಕಲ್ಯಾಣಕ್ಕಾಗಿ ಸೇವಾ ಕಾರ್ಯ ಮಾಡುವ ಸಂಸ್ಥೆಯಾಗಿದೆ. ಈ ಪುಣ್ಯಾಶ್ರಮದಿಂದ ಸಂಗೀತಗಾರರು, ಕಲಾವಿದರು, ಸಾಹಿತಿಗಳು, ನಾಟಕಕಾರರು, ಕೀರ್ತನಕಾರರು, ಪ್ರವಚನಕಾರುಗಳಾಗಿ ಸಾವಿರಾರು ಕಲಾವಿದರು ದೇಶದ ತುಂಬೆಲ್ಲ ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಿ ಪುಣ್ಯಾಶ್ರಮ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಪರಿಶುದ್ಧ ಮನಸ್ಸಿನಿಂದ ಕಟ್ಟಿದ ಪುಣ್ಯಾಶ್ರಮ ಉತ್ತರೋತ್ತರವಾಗಿ ಬೆಳೆಯಲಿ ಎಂದು ಹಾರೈಸಿದರು.

ಉಪ್ಪಿನ ಬೆಟಗೇರಿಯ ಮೂರುಸಾವಿರಮಠದ ಪೂಜ್ಯಶ್ರೀ ಕುಮಾರ ವಿರೂಪಾಕ್ಷ ಮಹಾಸ್ವಾಮಿಗಳು ಮಾತನಾಡಿ, ಪುಟ್ಟರಾಜ ಗವಾಯಿಗಳನ್ನು ನೋಡಿದರೆ ಪರಮಾತ್ಮನನ್ನು ನೋಡಿದಂತೆ. ಅವರ ಆಶೀರ್ವಾದ ಪಡೆದವರ ಜನ್ಮ ಸಾರ್ಥಕವಾದಂತೆ ಎಂದು ಹೇಳಿದರು. ವೇದಿಕೆಯ ಮೇಲೆ ಧಾರವಾಡ ಮುರಘಾಮಠದ ಪೂಜ್ಯಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಬಳಗಾನೂರ ಶ್ರೀಮಠದ ಪೂಜ್ಯಶ್ರೀ ಶಿವಶಾಂತವೀರ ಶರಣರು, ಅಡ್ನೂರ ಬ್ರಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯರು, ಮುದ್ದೇಬಿಹಾಳದ ಪೂಜ್ಯಶ್ರೀ ಡಾ. ಲಾಲಲಿಂಗೇಶ್ವರ ಶರಣರು, ಅಫಜಲಪೂರಿನ ಪೂಜ್ಯಶ್ರೀ ವಿರೂಪಾಕ್ಷಿ ದೇವರು, ಲಿಂಗಸೂರಿನ ಪೂಜ್ಯಶ್ರೀ ಶಿವಶರಣೆ ನಂದೀಶ್ವರಿ ಅಮ್ಮನವರು ಉಪಸ್ಥಿತರಿದ್ದರು.

ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಡಿಡಿಪಿಐ ಆರ್.ಎಸ್. ಬುರಡಿ, ಡಾ. ಪುರುಷೋತ್ತಮಗೌಡ್ರ, ದತ್ತಪ್ಪ ಸಾಗನೂರ, ಡಾ. ಸಂಗಮೇಶ ಕೊಳ್ಳಿ, ಎಂ.ಕೆ. ಪಟ್ಟಣಶೆಟ್ಟಿ, ಬಾಬುರಾವ್ ಕೋಬಾಳ, ಬಸಯ್ಯ ಗುತ್ತೇದಾರ, ನಾಡಗೌಡ್ರ ಚನ್ನೂರ ಮುಂತಾದವರು ಉಪಸ್ಥಿತರಿದ್ದರು. ಗದುಗಿನ ಶ್ರೀ ಕುಮಾರೇಶ್ವರ ಕೃಪಾ ಪೋಷಿತ ಪಂ. ಪಂಚಾಕ್ಷರ ಗವಾಯಿಗಳವರ ಸಂಗೀತ ಪಾಠಶಾಲೆಯ ವಿದ್ಯಾರ್ಥಿಗಳಿಂದ ಪ್ರಾರ್ಥನೆ ಜರುಗಿತು. ಅಡ್ನೂರಿನ ಎಂ. ಕಲ್ಲಿನಾಥ ಶಾಸ್ತ್ರಿ ಅವರು ಕಾರ್ಯಕ್ರಮ ನಿರೂಪಿಸಿದರು. ಪೂಜ್ಯಶ್ರೀ ಡಾ. ಕಲ್ಲಯ್ಯಜ್ಜನವರು ಅಭಾರ ಮನ್ನಣೆ ಮಾಡಿದರು.

ಇದೇ ಸಂದರ್ಭದಲ್ಲಿ ರಾಮಣ್ಣ ನಸಬಿ ಸಾ. ಬಿಳೇಕಲ್(ಸಂಗೀತ ಕ್ಷೇತ್ರ) ಅವರಿಗೆ 2025ನೇ ಸಾಲಿನ ಪದ್ಮಭೂಷಣ ಪಂ. ಪುಟ್ಟರಾಜ ಪ್ರಶಸ್ತಿ ಹಾಗೂ ಜಗಳೂರಿನ ವಿರೂಪಾಕ್ಷಯ್ಯ ಶಾಸ್ತ್ರಿ ಹಿರೇಮಠ (ಪ್ರವಚನ ಕ್ಷೇತ್ರ), ಬೆಂಗಳೂರಿನ ರಾಜು ಎಮ್ಮಿಗನೂರ (ಗಾಯನ ಕ್ಷೇತ್ರ) ಹಾಗೂ ಪ್ರಕಾಶ ಬಸರಿಗಿಡದ (ಭೂದಾನ ಕ್ಷೇತ್ರ) ಅವರುಗಳಿಗೆ ಕುಮಾರ ಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಸಿಎಂ, ಡಿಸಿಎಂ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಆರ್‌ಸಿಬಿ ಕ್ರಿಕೆಟ್ ತಂಡ ಕಪ್ ಗೆದ್ದ ಹಿನ್ನೆಲೆಯಲ್ಲಿ, ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕಾಲ್ತುಳಿತದಿಂದ 11 ಜನರು ಸಾವನ್ನಪ್ಪಿದ್ದನ್ನು ಖಂಡಿಸಿ, ಇದರ ನೈತಿಕ ಹೊಣೆ ಹೊತ್ತು ಸಿಎಂ ಹಾಗೂ ಡಿಸಿಎಂ ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿ ಪಟ್ಟಣದಲ್ಲಿ ಬಿಜೆಪಿ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಮಂಡಲ ಅಧ್ಯಕ್ಷ ಕೆ.ಲಕ್ಷ್ಮಣ ರಾಜ್ಯ ಸಹಕಾರಿ ಸೌಹಾರ್ದ ಬ್ಯಾಂಕಿನ ಅಧ್ಯಕ್ಷ ಜಿ.ನಂಜನಗೌಡ್ರು, ರಾಜ್ಯ ಎಸ್‌ಸಿ ಮೋರ್ಚಾ ಕಾರ್ಯದರ್ಶಿ ಎಸ್.ಪಿ. ಲಿಂಬ್ಯನಾಯ್ಕ, ಜಿಲ್ಲಾ ಎಸ್‌ಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಕಣಿವಿಹಳ್ಳಿ ಮಂಜುನಾಥ ಮಾತನಾಡಿಸರು.

ಜಿಲ್ಲಾ ಕಾರ್ಯದರ್ಶಿ ಕುಸುಮಾ ಜಗದೀಶ್, ಜಿಲ್ಲಾ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಚೆನ್ನನಗೌಡ, ಲಿಂಗಾನಂದ, ಮೈದುರ್ ಮಲ್ಲಿಕಾರ್ಜುನ, ಜವಳಿ ಮಹೇಶ್, ಪ್ರಾಣೇಶ್, ಬೂದಿ ನವೀನ್, ಶ್ರೀಪತಿ, ಟಿ.ಪಿ. ಮಂಜನಾಯ್ಕ್, ಹುಣಸಿಹಳ್ಳಿ ಪ್ರಕಾಶ್, ಎಸ್.ಆರ್. ಅಶೋಕ್, ಕಡಕೋಳ ಐ.ಸಿದ್ದನಗೌಡ, ಸಾಸಿವೆಹಳ್ಳಿ ಹಾಲೇಶ್, ಬಂಡ್ರಿ ಗುರು ಬಸವರಾಜ್, ಜಟ್ಟಪ್ಪ, ಗೌಳಿ ಎಲ್ಲಪ್ಪ, ಶೃಂಗಾರ ತೋಟಪ್ರಭು, ಕಣುವಿಹಳ್ಳಿ ನಿಂಗಪ್ಪ ಶಿವರಾಜ ಗಿರೀಶ್, ಮಂಡಲದ ಮಹಿಳಾ ಮೋರ್ಚಾ ಅಧ್ಯಕ್ಷೆ ಸಪ್ನ ಮಲ್ಲಿಕಾರ್ಜುನ, ಜಯಲಕ್ಷ್ಮೀ, ಹಳ್ಳಿಕೆರೆ ಮಂಜುಳಾ, ಕೆ. ಮಂಜುಳಾ, ರೋಜಾ ಹಾಗೂ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಜಕ್ಕಲಿ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಂದನಾ ಕಾರ್ಯಕ್ರಮ

# ಸ್ನೇಹ ಸಮ್ಮೇಳನ ವಿದ್ಯಾರ್ಥಿಗಳಿಗೆ ಸಹಕಾರಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶಾಲೆ ನಿಜವಾದ ದೇವಾಲಯವಿದ್ದಂತೆ. ಇಲ್ಲಿರುವ ಪ್ರತಿಯೊಬ್ಬ ಗುರುಗಳು ಪ್ರಾಮಾಣಿಕವಾಗಿ ತಮ್ಮ ಶಾಲೆಗಾಗಿ ಶ್ರದ್ಧೆ, ನಿಷ್ಠೆಯಿಂದ ದುಡಿದಿದ್ದಾರೆ. ಅವರ ನಿಸ್ವಾರ್ಥ ಸೇವೆ ಸ್ಮರಣೀಯವಾದದ್ದು. ಹಾಗಾಗಿ ಗುರುಗಳು ಕಲಿಸುವ ಪಾಠ ಪ್ರತಿಯೊಬ್ಬರ ಬಾಳು ಬೆಳಗುತ್ತದೆ ಎಂದು ಶಿಕ್ಷಣ ಪ್ರೇಮಿ ರವೀಂದ್ರನಾಥ ದೊಡ್ಡಮೇಟಿ ಹೇಳಿದರು.

ಸಮೀಪದ ಜಕ್ಕಲಿ ಗ್ರಾಮದ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರ್ಕಾರಿ ಪ್ರೌಢಶಾಲೆಯಲ್ಲಿ ಜರುಗಿದ 1998-99ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಸ್ನೇಹ ಸಮ್ಮೇಳನ ಹಾಗೂ ಗುರುವಂದನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಜ್ಞಾನ ತಂತ್ರಜ್ಞಾನ ಮುಂದುವರಿದ ಈ ಕಾಲದಲ್ಲಿ ವಿಶ್ವವೇ ಒಂದು ಗ್ರಾಮದಂತಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಅನೇಕ ವರ್ಷಗಳ ನಂತರ ಹಿರಿಯ ವಿದ್ಯಾರ್ಥಿಗಳು ಮತ್ತು ಗುರುಗಳನ್ನು ಒಟ್ಟುಗೂಡಿಸುವ, ತಮ್ಮ ಹಳೆಯ ದಿನಗಳನ್ನು ಮೆಲಕು ಹಾಕುವ ಸುಂದರ ಕ್ಷಣಗಳಿಗೆ ಸಾಕ್ಷಿಯಾದ ಇಂತಹ ಕಾರ್ಯಕ್ರಮ ಇದೀಗ ಅಗತ್ಯವಿದೆ. ಆ ಮೂಲಕ ಈಗಿರುವ ವಿದ್ಯಾರ್ಥಿಗಳಿಗೂ ಸಾಧಿಸಲು ಸಹಕಾರಿಯಾಗುತ್ತದೆ ಎಂದು ಹೇಳಿದರು.


ಮುಖ್ಯ ಅತಿಥಿಯಾಗಿ ಮಾತನಾಡಿದ ನರೇಗಲ್ಲ ಪೊಲೀಸ್ ಠಾಣೆಯ ಪಿಎಸ್‌ಐ ಐಶ್ವರ್ಯ ವಿಶ್ವನಾಥ ನಾಗರಾಳ, ಗುರು-ಶಿಷ್ಯರ ಸಂಬಂಧ ಒಂದು ಬಾಂಧವ್ಯದಂತೆ. ಗುರುವಿಗೆ ಶಿಷ್ಯರು ವಂದನೆ ಸಲ್ಲಿಸುವ ಪರಂಪರೆ ಇತಿಹಾಸದ ಪುಟಗಳಲ್ಲಿ ದಾಖಲಾಗಿದೆ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶಿಕ್ಷಕ ವಿ.ವಿ. ಅಣ್ಣಿಗೇರಿ ಕಾರ್ಯಕ್ರಮದ ಔಚಿತ್ಯತೆ, ಗುರು ಭಕ್ತಿ, ಗುರು-ಶಿಷ್ಯರ ಪರಂಪರೆ ಕುರಿತು ಮಾರ್ಮಿಕವಾಗಿ ಮಾತನಾಡಿದರು. ನಿವೃತ್ತ ಶಿಕ್ಷಕರಾದ ಎಸ್.ಟಿ. ಗುಳಗಣ್ಣವರ, ಎಂ.ವೈ. ಹಳೆಮನೆ, ಡಿ.ಬಿ. ತಳವಾರ, ಸಿ.ವಿ. ಗುತ್ತೆಪ್ಪನವರ, ಎಸ್.ಟಿ. ಕಳಸಾಪುರ, ಎಸ್.ಆರ್. ಬಾಗಲಿ, ಎಸ್.ಬಿ. ಬಳಿಗೇರ, ನಿವೃತ್ತ ದ್ವಿತೀಯ ದರ್ಜೆ ಸಹಾಯಕ ಎನ್.ಬಿ. ಹಿರೇಮನಿ, ಅಯ್ಯಪ್ಪ ತಿಲಗರ, ಎಚ್.ವೈ. ಮಣ್ಣೊಡ್ಡರ ಇವರನ್ನು ಸನ್ಮಾನಿಸಲಾಯಿತು.

ಶಿಕ್ಷಕರಾದ ನೆಹರು ಮನೋಳಿ, ಆರ್.ಡಿ. ಬಡಿಗೇರ, ಗೌರಮ್ಮ, ಸಾವಿತ್ರಿ, ಮಂಜುನಾಥ ಹೂಗಾರ ಇದ್ದರು. 1998-99 ನೇ ಸಾಲಿನ ವಿದ್ಯಾರ್ಥಿಗಳಾದ ಪ್ರಮೋದ್ ಯಾವಗಲ್ಲ, ಬಸವರಾಜ ಶಿವಶಿಂಪರ, ಶ್ರೀನಿವಾಸ ಹುಲ್ಲೂರ, ಶಿವರಾಜ ಮುಗಳಿ, ನಜೀರ್ ಗಡಾದ, ಸಂಗಪ್ಪ ತಮ್ಮಿನಾಳ, ಗುರು ಭಜಂತ್ರಿ, ರಾಜಸಾಬ್ ಓಲೇಕಾರ, ಮಹೇಶ್ ಶಿವಶಿಂಪರ, ಶಂಕ್ರಪ್ಪ ಅರಮನಿ, ಸಿದ್ದಪ್ಪ ಮಾದರ, ಪರಮೇಶ ಕುಂಬಾರ, ಪ್ರೇಮಾ ಹುಲ್ಲೂರ, ರೇಣುಕಾ ಉಮಚಗಿ, ಬಸವಣ್ಣೆವ್ವ ತಳವಾರ, ಸುಮಂಗಲಾ ಪಾಟೀಲ, ಸಾವಿತ್ರಿ ಪಟ್ಟಣಶೆಟ್ಟಿ, ಶರಣಮ್ಮ ಶಿವಶಿಂಪರ, ಮಮತಾಜ ನದಾಫ್, ಅಂಬಿಕಾ ಬಲ್ಕಿ, ಜುಲೇಖ ಗಡಾದ, ಸಫೂರ ಗಡಾದ ಪಾಲ್ಗೊಂಡಿದ್ದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ನಿವೃತ್ತ ಶಿಕ್ಷಕ, ಆಕಾಶವಾಣಿ ಕಲಾವಿದ ಸಿ.ಎಂ. ವಡಗೇರಿ, ಶಿಕ್ಷಕ ವೃತ್ತಿ ಎಲ್ಲಾ ವೃತ್ತಿಗಳಲ್ಲಿಯೇ ಶ್ರೇಷ್ಠ ವೃತ್ತಿ. ಶಿಕ್ಷಕರು ಸಮಾಜದ ಬಹುದೊಡ್ಡ ಆಸ್ತಿ. ಶಿಕ್ಷಕರೆಂದರೆ ಕೇವಲ ವ್ಯಕ್ತಿಯಲ್ಲ, ಅವರು ಸಮಾಜದ ಬಹುದೊಡ್ಡ ಶಕ್ತಿ ಎಂದರು.

# ಅನುದಾನಿತ ಶಾಲಾ-ಕಾಲೇಜುಗಳ ಬಂದ್‌ಗೆ ತೀರ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಖಾಸಗಿ ಅನುದಾನಿತ ಶಾಲೆಗಳ ಸಮಸ್ಯೆಗಳನ್ನು ಬಗೆಹರಿಸಲು, ಹಾವೇರಿ ಜಿಲ್ಲಾ ಅನುದಾನಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳತ ಮಂಡಳಿಗಳ ಒಕ್ಕೂಟ ಕಳೆದ ಹಲವಾರು ವರ್ಷಗಳಿಂದ ನಿರಂತರ ಪ್ರಯತ್ನ ಮಾಡುತ್ತಾ ಬಂದಿದ್ದು, ಆಳುವ ಎಲ್ಲಾ ಪಕ್ಷದ ಸರ್ಕಾರಗಳು ಅನುದಾನಿತ ಶಾಲಾ-ಕಾಲೇಜುಗಳನ್ನು ನಿರ್ಲಕ್ಷಿಸುತ್ತಾ ಬಂದಿವೆ.

ಕಾರಣ, ಖಾಸಗಿ ಆಡಳಿತ ಮಂಡಳಗಳು ಇನ್ನೂ ಎಷ್ಟು ದಿವಸ ಮಕ್ಕಳ ಶಿಕ್ಷಣಕ್ಕೆ ಹಣ ಜೋಡಿಸಬೇಕು ಎಂಬುದು ಯಕ್ಷ ಪಶ್ನೆಯಾಗಿದೆ. ಆಳುವ ಪ್ರಭುಗಳು ನಮ್ಮ ಮನವಿಗೆ ಸ್ಪಂದಿಸುವ ಪರಿಸ್ಥಿತಿಯಲ್ಲಿಲ್ಲವಾದ್ದರಿಂದ ಸರ್ಕಾರದ ಈ ಧೋರಣೆಯನ್ನು ಪ್ರತಿಭಟಿಸಲು ಇತ್ತೀಚೆಗೆ ಹಾವೇರಿ ತಾಲೂಕಿನ ನೆಗಳೂರು ಗ್ರಾಮದಲ್ಲಿ ನಡೆದ ಅನುದಾನಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಗಳ ಒಕ್ಕೂಟದ ಅಧ್ಯಕ್ಷ ಎ.ಎಸ್. ಬಳ್ಳಾರಿಯವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ತುರ್ತು ಬೇಡಿಕೆಗಳನ್ನು ಈಡೇರಿಸಲು ಅನುದಾನಿತ ಶಾಲಾ ಕಾಲೇಜುಗಳನ್ನು ಅನಿರ್ದಿಷ್ಟ ಅವಧಿಗೆ ಬಂದ್ ಮಾಡಲು ತೀರ್ಮಾನಿಸಿದೆ ಎಂದು, ಒಕ್ಕೂಟದ ಉಪಾಧ್ಯಕ್ಷ ಡಾ. ಆರ್.ಎಂ. ಕುಬೇರಪ್ಪ ಪ್ರತಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಡೀ ಉತ್ತರ ಕರ್ನಾಟಕದ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ಸೂಕ್ತ ಆಡಳಿತ ಮಂಡಳಿಗಳ ಪ್ರತಿನಿಧಿಗಳ ಸಭೆಯನ್ನು ಇಷ್ಟರಲ್ಲಿಯೇ ಹುಬ್ಬಳಿಯಲ್ಲಿ ಕರೆದು, ಎಲ್ಲರ ವಿಶ್ವಾಸ ಪಡೆದು ಅನಿರ್ದಿಷ್ಟ ಅವಧಿವರೆಗೆ ಶಾಲಾ-ಕಾಲೇಜುಗಳನ್ನು ಬಂದ್ ಮಾಡಲು ದಿನಾಂಕವನ್ನು ನಿಗದಿ ಮಾಡಲಾಗುವುದು, ಈ ಸಭೆಗೆ ಎಲ್ಲಾ ಅನುದಾನಿತ ಶಾಲಾ ಪ್ರತಿನಿಧಿಗಳು ಹಾಜರಿದ್ದು ಸೂಕ್ತ ಸಲಹೆ ನೀಡಿ ಸಹಕರಿಸಬೇಕೆಂದು ಒಕ್ಕೂಟದ ಅಧ್ಯಕ್ಷ ಎ.ಎಸ್. ಬಳ್ಳಾರಿ, ಕಾರ್ಯದರ್ಶಿ ಬಸವರಾಜ್ ಹಾದಿಮನಿಯವರು ಸೂಚನೆ ನೀಡಿದ್ದಾರೆಂದು ಡಾ. ಆರ್.ಎಂ. ಕುಬೇರಪ್ಪ ತಿಳಿಸಿದ್ದಾರೆ.




ಗದಗ ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಉಭಯ ಶ್ರೀಗಳ ಜಾತ್ರಾ ಮಹೋತ್ಸವದ ಅಂಗವಾಗಿ ರಾಮಣ್ಣ ನಸಬಿ ಸಾ. ಬಿಳೇಕಲ್(ಸಂಗೀತ ಕ್ಷೇತ್ರ) ಅವರಿಗೆ 2025ನೇ ಸಾಲಿನ ಪದ್ಮಭೂಷಣ ಪಂ. ಪುಟ್ಟರಾಜ ಪ್ರಶಸ್ತಿ ಹಾಗೂ ಜಗಳೂರಿನ ವಿರೂಪಾಕ್ಷಯ್ಯಶಾಸ್ತ್ರಿ ಹಿರೇಮಠ (ಪ್ರವಚನ ಕ್ಷೇತ್ರ), ಬೆಂಗಳೂರಿನ ರಾಜು ಎಮ್ಮಿಗನೂರ (ಗಾಯನ ಕ್ಷೇತ್ರ) ಹಾಗೂ ಪ್ರಕಾಶ ಬಸರಿಗಿಡದ (ಭೂದಾನ ಕ್ಷೇತ್ರ) ಅವರುಗಳಿಗೆ 'ಕುಮಾರ ಶ್ರೀ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಜೂ.21ರಂದು 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

▸▸ಮೊದಲನೇ ಪುಟದಿಂದ

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಆಯುಷ್ ನಿರ್ದೇಶನಾಲಯದ ಆಯುಕ್ತರಾದ ವಿಪಿನ್ ಸಿಂಗ್ ಆಗಮಿಸುವರು. ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ , ಜಿಲ್ಲಾ ಆಯುಷ್ ಅಧಿಕಾರಿ ಡಾ. ಜಯಪಾಲಸಿಂಗ್ ಪಿ ಸಮೋರೆಕರ್ ಸ್ವಾಗತ ಕೋರಿದ್ದಾರೆ. ಸಾಮೂಹಿಕ ಯೋಗ ನಡಿಗೆ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಜೂನ್ 19 ರಂದು ಗುರುವಾರ ಬೆಳಿಗ್ಗೆ 9 ಗಂಟೆಗೆ ನಗರದ ಮುನ್ಸಿಪಲ್ ಆವರಣದಿಂದ ಸಾಮೂಹಿಕ ಯೋಗ ನಡಿಗೆಯನ್ನು ಹಮ್ಮಿಕೊಳ್ಳಲಾಗಿದೆ.



**ಗದಗ :** ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಮಂಗಳವಾರ ಉಭಯ ಗುರುಗಳ ಜಾತ್ರಾ ಮಹೋತ್ಸವದಲ್ಲಿ ಖ್ಯಾತ ಗಾಯಕರು ಹಾಗೂ ಶ್ರೀಮಠದ ಪರಮ ಭಕ್ತರಾದ ಪಂಡಿತ ವೆಂಕಟೇಶಕುಮಾರ ಅವರು ಸಂಗೀತ ಕಾರ್ಯಕ್ರಮ ನೀಡಿದರು.

## ಬಣಜಿಗ ಕ್ಷೇಮಾಭಿವೃದ್ಧಿ ಟ್ರಸ್ಟ್ ವತಿಯಿಂದ ಪ್ರತಿಭಾ ಪುರಸ್ಕಾರ

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಗತ್ತನ್ನು ವಿಜ್ಞಾನಿಗಳು, ವ್ಯಾಪಾರಸ್ಥರು ಹಾಗೂ ಬರಹಗಾರರು ಈ ಮೂವರೇ ನಿಯಂತ್ರಣ ಮಾಡುತ್ತಾರೆ. ಜಗತ್ತು ನಡೆಯುವದು ವಿಜ್ಞಾನಿಗಳಿಂದ, ಅವರು ಕಂಡುಹಿಡಿಯುವದನ್ನು ಜಗತ್ತಿಗೆ ತೋರಿಸುವವರು ವ್ಯಾಪಾರಿ. ವಿಜ್ಞಾನಿ ಕಂಡು ಹಿಡಿದಿರುವದು ಮತ್ತು ಇಂತಹದನ್ನು ವ್ಯಾಪಾರ ಮಾಡುವ ಬಗ್ಗೆ ಜಗತ್ತಿಗೆ ಪರಿಚಯಿಸುವವರು ಬರಹಗಾರರು ಎಂದು ಚಿಂತಕ ಪ್ರೊ. ಸಿದ್ದು ಯಾಪಲಪರವಿ ಅಭಿಪ್ರಾಯಪಟ್ಟರು.

ಅವರು ಅವರು ಪಟ್ಟಣದ ಬಿಸಿಎನ್ ಪಾಲಿಟೆಕ್ನಿಕ್ ಕಾಲೇಜು ಸಭಾಭವನದಲ್ಲಿ ರವಿವಾರ ಬಣಜಿಗ ಕ್ಷೇಮಾಭಿವೃದ್ಧಿ ಟ್ರಸ್ಟ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸಾಧಕರಿಗೆ ಸನ್ಮಾನ, ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು. ಇಂದು ಜಗತ್ತು ಸಾಕಷ್ಟು ಪ್ರಮಾಣದಲ್ಲಿ ಬೆಳೆದಿದೆ. ಆದರೆ ದೊಡ್ಡ ಪ್ರಮಾಣದಲ್ಲಿರುವ ಸಮಾಜದವರು ಇಂದು ಯಾವ ನಿಟ್ಟಿನಲ್ಲಿ ಬೆಳದಿದ್ದೇವೆ ಎನ್ನುವದನ್ನು ಚಿಂತನೆ ಮಾಡಿಕೊಳ್ಳಬೇಕು. ವಿದೇಶಗಳಲ್ಲಿ ನಮ್ಮ ದೇಶದವರೇ ಇಂದು ಕೋಟ್ಯಾಧೀಪತಿಗಳಾಗಿದ್ದಾರೆ. ಆದರೆ ನಮ್ಮ ಮಕ್ಕಳು ಅಲ್ಪಸ್ವಲ್ಪ ಸಂಬಳಕ್ಕಾಗಿ ಬೇರೊಬ್ಬರನ್ನು ಅವಲಂಬಿಸುವಂತಾಗಿದೆ. ಇದು ಪ್ರತಿಯೊಬ್ಬರೂ ಚಿಂತನೆ ಮಾಡಬೇಕಾದ ಗಂಭೀರ ವಿಷಯವಾಗಿದೆ. ನಾವು ಬೆಳೆಯುವದರ ಜೊತೆಗೆ ಸಮಾಜದಲ್ಲಿ ಮತ್ತೊಬ್ಬರಿಗೆ ಉದ್ಯೋಗ ಸೃಷ್ಟಿ ಮಾಡುವಂತಹ ಕಾರ್ಯ ಮಾಡಬೇಕು. ಸಮಾಜದ ವತಿಯಿಂದ ಹೆಚ್ಚು ಅಂಕಗಳನ್ನು ಗಳಿಸಿದ ಮಕ್ಕಳ ಪುರಸ್ಕಾರ, ಸಾಧಕರನ್ನು ಗುರುತಿಸಿ ಗೌರವಿಸುತ್ತಿರುವದು ಉತ್ತಮ ವಿಚಾರ. ಮಕ್ಕಳು ದೇಶದ ಆಸ್ತಿ. ಅವರಿಗೆ ಗುಣಮಟ್ಟದ ಶಿಕ್ಷಣ ಕೊಡಿಸಬೇಕು. ಆಗ ಮಾತ್ರ ಸಮಾಜ ಉದ್ಧಾರ ಆಗಲಿದೆ. ಜತೆಗೆ ಮಕ್ಕಳ ಭವಿಷ್ಯ ಕೂಡ ಉಜ್ವಲವಾಗಲಿದೆ ಎಂದು ಹೇಳಿದರು.

ಚಂದ್ರಶೇಖರ ಮಹಾಜನಶೆಟ್ಟರ ಪ್ರಾಸ್ತಾವಿಕವಾಗಿ ಮಾತನಾಡಿ, ಬಣಜಿಗ ಕ್ಷೇಮಾಭಿವೃದ್ಧಿ ಟ್ರಸ್ಟ್ ಪ್ರಾರಂಭಿಸಿದ 4 ವರ್ಷಗಳಿಂದ ಸಾಕಷ್ಟು ಸಂಘಟನೆಯಾಗಿದ್ದು, ಸಮಾಜ ಸಂಘಟನೆಯಾದರೆ ನಾವು ಬೆಳೆಯುತ್ತೇವೆ, ಸಮಾಜವೂ ಬೆಳೆಯುತ್ತದೆ ಎಂದು ಹೇಳಿದರು.

ಟ್ರಸ್ಟ್‌ನ ಅಧ್ಯಕ್ಷ ವಿಜಯಕುಮಾರ ಹತ್ತಿಕಾಳ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಟ್ರಸ್ಟ್‌ನ ಉಪಾಧ್ಯಕ್ಷ ಲೋಹಿತ ನೆಲವಿಗಿ, ಮಹಿಳಾ ಘಟಕದ ಅಧ್ಯಕ್ಷೆ ರತ್ನಾ ಕರ್ಕಿ, ಹಿರಿಯರಾದ ನಿರ್ಮಲಾದೇವಿ ಹತ್ತಿಕಾಳ, ಬಸವರಾಜ ಬೆಂಡಿಗೇರಿ ಉಪಸ್ಥಿತರಿದ್ದರು. ನಂದಿನಿ ಮಾಳವಾಡ ಪ್ರಾರ್ಥಿಸಿದರು, ಅಕ್ಷತಾ ವಡಕಣ್ಣವರ ಸ್ವಾಗತಿಸಿದರು. ಬಸವರಾಜ ಶೆಟ್ಟರ, ಶೋಭಾ ಗಾಂಜಿ ನಿರೂಪಿಸಿದರು. ಜೆ.ಎಸ್. ರಾಮಶೆಟ್ಟರ ವಂದಿಸಿದರು.

ಸಾನ್ನಿಧ್ಯ ವಹಿಸಿದ್ದ ಬನ್ನಿಕೊಪ್ಪ ಜಪದಕಟ್ಟಿಮಠದ ಡಾ. ಸುಜ್ಞಾನದೇವ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಎಲ್ಲ ಸಮಾಜಗಳು ಶ್ರೇಷ್ಠತೆಯನ್ನು ಹೊಂದಿವೆ. ಈ ನಿಟ್ಟಿನಲ್ಲಿ ಬಣಜಿಗ ಸಮಾಜ ವ್ಯಾಪಾರ ವೃತ್ತಿಯನ್ನು ಅಳವಡಿಸಿಕೊಂಡಿದ್ದರೂ ಸಹ ಸಾಮಾಜಿಕ, ಶೈಕ್ಷಣಿಕವಾಗಿಯೂ ಸಾಕಷ್ಟು ಪ್ರಗತಿಯನ್ನು ಕಾಣುತ್ತಿದ್ದಾರೆ. ಪ್ರತಿಭಾ ಪುರಸ್ಕಾರ ಉತ್ತಮ ಕಾರ್ಯವಾಗಿದ್ದು, ಇದರಿಂದ ಮಕ್ಕಳಲ್ಲಿ ಹೆಚ್ಚು ಹೆಚ್ಚು ಆಸಕ್ತಿ ಬೆಳೆಯಲು ಸಾಧ್ಯವಾಗುತ್ತದೆ ಎಂದು ನುಡಿದರು.

# ಸಿಕ್ಕದ ತಲೆ ಬುರುಡೆಗಾಗಿ ನಿಲ್ಲದ ಶೋಧ

▸▸ಮೊದಲನೇ ಪುಟದಿಂದ

ಹೋಗುತ್ತಿರುವ ಸಿಸಿ ಟಿವಿ ದೃಶ್ಯದ ತುಣುಕನ್ನೂ ಪೊಲೀಸರು ಪತ್ತೆ ಮಾಡಿದ್ದರು. ಅದಲ್ಲದೆ, ಸತೀಶನ ಮೊಬೈಲ್‌ನ ಇನ್ನೊಂದು ಸಿಮ್‌ಗೆ ಬಂದಿದ್ದ ಎಸ್‌ಎಂಎಸ್ ಒಂದು ಪೊಲೀಸರಿಗೆ ಸುಳಿವು ನೀಡಿತ್ತು. ಆಗ ಬೈಕ್ ಮೇಲೆ ಇಬ್ಬರೂ ಹೋಗಿದ್ದೇನೋ ನಿಜ. ಆದರೆ, ಮಧುಶ್ರೀಯನ್ನು ಹಾತಲಗೇರಿ ಗ್ರಾಮದ ಬಳಿ ಬಿಟ್ಟು, ನಾನು ಪೆಟ್ರೋಲ್ ಬಂಕ್‌ನಲ್ಲಿ ಕೆಲಸಕ್ಕೆ ಹೋಗಿದ್ದೇನೆ ಎಂದು ಕಥೆ ಹೇಳಿದ್ದ.

**ತಲೆ ಬುರುಡೆಗಾಗಿ ಅಲೆದಾಟ:**



ಪೊಲೀಸರು ತಮ್ಮದೇ ಶೈಲಿಯಲ್ಲಿ ವಿಚಾರಣೆ ನಡೆಸಿದಾಗ, ಸತೀಶ್ ಹಿರೇಮಠ ದಾರಿಗೆ ಬಂದಿದ್ದ. ತನ್ನ ಪ್ರಿಯತಮೆ ಮಧುಶ್ರೀಯನ್ನು ತಾನೇ ಕೊಂದು ಜಮೀನಿನಲ್ಲಿ ಹೂತಿರುವುದಾಗಿ ಒಪ್ಪಿಕೊಂಡಿದ್ದ. ಆಕೆಯ ಶವವನ್ನು ಹೂತಿರುವ ಸ್ಥಳವನ್ನೂ ತೋರಿಸಿದ್ದ. ಈಗ ಎರಡು ದಿನಗಳ ಹಿಂದೆ ಆತ ತೋರಿಸಿದ ಸ್ಥಳದಲ್ಲಿ ಕೆಲ ಮೂಳೆಗಳು ದೊರೆತ್ತಿದ್ದವು. ಆದರೆ, ಯುವತಿಯ ತಲೆ ಬುರುಡೆ ಮಾತ್ರ ಸಿಕ್ಕಿರಲಿಲ್ಲ. ಮಂಗಳವಾರ ಗದಗ ಎಸಿ ಗಂಗಪ್ಪ ಅವರ ಸಮ್ಮುಖದಲ್ಲಿ ಪೊಲೀಸರು ಮಧುಶ್ರೀಯ ತಲೆ ಬುರುಡೆಗಾಗಿ ಶೋಧ ಆರಂಭಿಸಿದಾಗಿನಿಂದಲೂ ಹಂತಕ ಅಧಿಕಾರಿಗಳಿಗೇ ದಾರಿ ತಪ್ಪಿಸಿದ್ದ. 5 ಗಂಟೆಗಳಿಗೂ ಹೆಚ್ಚು ಕಾಲ ಎರಡು ಕಡೆ ಅಗೆದರೂ ತಲೆ ಬುರುಡೆ ಪತ್ತೆಯಾಗಿಲ್ಲ.

# ಜಿಲ್ಲಾ ಮಟ್ಟದ ಯೋಗ ಸ್ಪರ್ಧೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಬಸವ ಯೋಗ ಮಹಾವಿದ್ಯಾಲಯ ಗದಗ ಮತ್ತು ಗದಗ ಜಿಲ್ಲಾ ಆಯುಷ್ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಜೂನ್ 18ರ ಬೆಳಿಗ್ಗೆ 10-30ಕ್ಕೆ ವಿವಿಧ ಸ್ಪರ್ಧೆಗಳು ಜರುಗಲಿವೆ.

ಪ್ರಾಥಮಿಕ ಶಾಲಾ ಮಕ್ಕಳಿಗಾಗಿ ಯೋಗಾಸನ ಸ್ಪರ್ಧೆಯು ಸಿದ್ಧಲಿಂಗ ನಗರದಲ್ಲಿನ ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆಯ ಬಸವ ಯೋಗ ಹಾಲ್‌ನಲ್ಲಿ ನಡೆಯುವದು. ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಯೋಗ ಪರಿಣಿತಿ (ಯೋಗ ಲಿಖಿತ ಕ್ವಿಜ್) ಸ್ಪರ್ಧೆ ಭೂಮರಡ್ಡಿ ಸರ್ಕಲ್ ಹತ್ತಿರ ಇರುವ ತೋಂಟದಾರ್ಯ ಪ್ರೌಢಶಾಲೆಯಲ್ಲಿ ನಡೆಯುವದು.

ಕಾಲೇಜು ವಿದ್ಯಾರ್ಥಿಗಳಿಗಾಗಿ 'ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ' ವಿಷಯದ ಕುರಿತು ಯೋಗ ನಿಬಂಧ ಸ್ಪರ್ಧೆಯು ರೋಟರಿ ಸರ್ಕಲ್ ಹತ್ತಿರ ಇರುವ ಬಸವೇಶ್ವರ ಪದವಿ (ಕಲಾ, ವಾಣಿಜ್ಯ, ವಿಜ್ಞಾನ) ಮಹಾವಿದ್ಯಾಲಯದಲ್ಲಿ ನಡೆಯುವುದು.

ಭಾಗವಹಿಸಲಿರುವ ಸ್ಪರ್ಧಿಗಳು ವೇಳೆಗೆ ಸರಿಯಾಗಿ ಆಯಾ ಸ್ಪರ್ಧೆಗಳು ನಡೆಯುವ ಸ್ಥಳದಲ್ಲಿ ಹಾಜರಿರಬೇಕು.

ಸ್ಪರ್ಧೆಗಳು ಏಕಕಾಲಕ್ಕೆ ಪುರುಷ ಹಾಗೂ ಮಹಿಳೆಯರಿಗೆ ಒಟ್ಟಿಗೆ ನಡೆಯುವವು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ-9731082181, 9448317188 ಸಂಪರ್ಕಿಸಬಹುದಾಗಿದೆ ಎಂದು ಸಂಘಟಕರ ಪರವಾಗಿ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ತಿಳಿಸಿದ್ದಾರೆ.

### ತಂದೆಯ ಅಗಲಿಕೆಯ ನೋವಿನಲ್ಲೂ ಪರೀಕ್ಷೆ ಬರೆದಿದ್ದ ವಿದ್ಯಾರ್ಥಿನಿ ಶಬಾನಾ

# ವಿದ್ಯಾಭ್ಯಾಸ ಮುಂದುವರೆಸಲು ಪ್ರೋತ್ಸಾಹ, ನೆರವು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ತಂದೆಯ ಸಾವಿನ ದುಃಖದ ನಡುವೆಯೂ ನವಲಗುಂದ ಪಟ್ಟಣದ ಸರ್ಕಾರಿ ಉರ್ದು ಪ್ರೌಢಶಾಲೆ ವಿದ್ಯಾರ್ಥಿನಿ ಶಬಾನಾ ನೂರ್‌ಹಸನ್ ಪಟಾಸು ಅವರು ಕಳೆದ ಮಾರ್ಚ್ ತಿಂಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾಗಿ ನಂತರ ಪ್ರಕಟಗೊಂಡ ಫಲಿತಾಂಶದಲ್ಲಿ ಶೇ. 70 ಅಂಕ ಪಡೆದು ಎಸ್‌ಎಸ್‌ಎಲ್‌ಸಿ ಪಾಸಾಗಿದ್ದಳು.



ಸದಾಕಾಲ ಬಡವರು, ಹಿಂದುಳಿದವರು, ಮಹಿಳೆ, ಮಕ್ಕಳ ಬಗ್ಗೆ ಅತೀವ ಕಾಳಜಿ, ಕಳಕಳಿ ತೋರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಪರೀಕ್ಷೆ ದಿನದಂದೇ ತಂದೆ ನಿಧನರಾದರೂ ನೋವಿನಲ್ಲೂ ಅಂದಿನ ಪರೀಕ್ಷೆಗೆ ಗೈರುಹಾಜರಾಗದೆ ಪರೀಕ್ಷೆ ಬರೆದು ಇತರರಿಗೆ ಮಾದರಿಯಾಗಿರುವ ಶಬಾನಾಳ ಮನೆ ಬಾಗಿಲಿಗೆ ಹೋಗಿ, ಅವಳನ್ನು ಬೆನ್ನು ತಟ್ಟಿ ಪ್ರೋತ್ಸಾಹಿಸಿದ್ದಾರೆ. ಒಂದೇ ದಿನದಲ್ಲಿ ಅವಳ ತಾಯಿಗೆ ವಿಧವಾ ವೇತನ, ರಾಷ್ಟ್ರೀಯ ಕೌಟುಂಬಿಕ ನೆರವು ಯೋಜನೆಯಡಿ ಪರಿಹಾರ ನೀಡಿ, ಧೈರ್ಯ ತುಂಬಿದ್ದರು. ಈ ವಿದ್ಯಾರ್ಥಿನಿ ಸೋಮವಾರ ಧಾರವಾಡ ಜಿಲ್ಲಾ ಪಂಚಾಯತಗೆ ಆಗಮಿಸಿ, ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್, ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕರಾದ ಸಲೀಂ ಅಹ್ಮದ್, ಶಾಸಕ ಎನ್.ಎಚ್. ಕೋನರಡ್ಡಿ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಉಪ ವಿಭಾಗಧಿಕಾರಿ ಶಾಲಂ ಹುಸೇನ್, ಡಿಡಿಪಿಐ ಕೆಳದಿಮಠ ಅವರನ್ನು ಭೇಟಿ ಮಾಡಿ ಸಿಹಿ ನೀಡಿ ಕೃತಜ್ಞತೆ ಸಲ್ಲಿಸಿದಳು. ಸದ್ಯ ಶಾಸಕ ಎನ್. ಎಚ್. ಕೋನರಡ್ಡಿ ಪುರಸಭೆಯಿಂದ ನೀಡುತ್ತಿರುವ ಆಶ್ರಯ ನಿವೇಶನ ಮಂಜೂರಿ ಮಾಡಿ ಫಲಾನುಭವಿ ಪಾಲಿನ ಒಂದು ಲಕ್ಷ ಹಣವನ್ನು ಸರಕಾರಕ್ಕೆ ತುಂಬಿ ಮನೆ ನಿರ್ಮಾಣ ಮಾಡುತ್ತಿದ್ದು, ಇನ್ನೆರಡು ತಿಂಗಳಲ್ಲಿ ಸಂಪೂರ್ಣ ಮನೆ ನಿರ್ಮಾಣ ಮಾಡಿ ಶಬಾನಾ ಅವರಿಗೆ ಮನೆ ಹಸ್ತಾಂತರ ಮಾಡಲಿದ್ದಾರೆ.

ಜಿಲ್ಲಾಧಿಕಾರಿಗಳು ಈಗಾಗಲೇ ತಾಯಿಗೆ ವಿಧವಾ ವೇತನ, ರಾಷ್ಟ್ರೀಯ ಕೌಟುಂಬಿಕ ನೆರವು, ಮಕ್ಕಳ ರಕ್ಷಣಾ ಘಟಕದಿಂದ ಏಕಪೋಷಕರ ಯೋಜನೆಯಡಿ ಶಿಷ್ಯ ವೇತನ ಹಾಗೂ ಶಬಾನಾ ಅವರ ತಾಯಿಗೆ ಮಾನಸಿಕ ಕಾಯಿಲೆಯಿಂದ ಗುಣಮುಖರಾಗುವ ಔಷದಿಯನ್ನು ವೈದ್ಯರ ಮೂಲಕ ಕೊಡಿಸುತ್ತಿದ್ದಾರೆ. ಜಿಲ್ಲಾಧಿಕಾರಿಗಳನ್ನು ತನ್ನ ಕುಟುಂಬದೊಂದಿಗೆ ಭೇಟಿ ಮಾಡಿದ ಶಬಾನಾ, ಈಗ ಪಿಯುಸಿ ಓದಲು ಇಚ್ಛಿಸಿ, ಕಾಲೇಜು ಅಡ್ಮಿಶನ್ ಫೀ, ಹಾಸ್ಟೆಲ್ ಸೌಲಭ್ಯಕ್ಕಾಗಿ ವಿನಂತಿಸಿದ್ದಾಳೆ. ಜಿಲ್ಲಾಧಿಕಾರಿಗಳು ಎಲ್ಲವನ್ನು ಕಲ್ಪಿಸಿ ಅವಳ ಓದಿಗೆ ನೇರವಾಗುವ ಭರವಸೆ ನೀಡಿದ್ದು, ಅವಳ ಸಹೋದರಿಯರ ಓದಿಗೆ ಅಗತ್ಯ ಸೌಲಭ್ಯ ಸಹಾಯ ನೀಡುವದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ನವಲಗುಂದ ತಹಸೀಲ್ದಾರ ಸುಧೀರ ಸಾಹುಕಾರ, ಪುರಸಭೆ ಮುಖ್ಯಾಧಿಕಾರಿ ಎಸ್.ಪಿ. ಪೂಜಾರ, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ಬಿ. ಮಲ್ಲಾಡ, ವಾರ್ತಾ ಇಲಾಖೆಯ ಡಾ. ಎಸ್.ಎಂ. ಹಿರೇಮಠ ಇತರರು ಉಪಸ್ಥಿತರಿದ್ದರು.

> ಕುಟುಂಬದಲ್ಲಿ ತಾಯಿ ಮಾನಸಿಕ ಅಸ್ವಸ್ಥೆ. ತಂದೆ ಇಲ್ಲ. ತಾಯಿಯ ಸಹೋದರ ಈ ಕುಟುಂಬದ ಪಾಲಕ. ಶಬಾನಾ ಸೇರಿ 4 ಜನ ಹೆಣ್ಣುಮಕ್ಕಳು. ಮನೆಗೆ ಶಬಾನಾ ಹಿರಿಯ ಮಗಳು. ಈ ವಿದ್ಯಾರ್ಥಿನಿಗೆ ಅನುಕೂಲವಾಗುವಂತೆ ಅವರ ಕುಟುಂಬಕ್ಕೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪಶು ಪಾಲನಾ ಇಲಾಖೆಯಿಂದ ಸ್ವಯಂ ಉದ್ಯೋಗ ಯೋಜನೆಯಡಿ, 40 ಕೋಳಿ ಮರಿಗಳನ್ನು ನೀಡಿದ್ದು, ಜೀವನೋಪಾಯ ನಡೆಯುತ್ತಿದೆ.

### ಡಿಜಿಟಲ್ ಅರೆಸ್ಟ್ ಹೆಸರಿನಲ್ಲಿ ವೈದ್ಯರನ್ನು ವಂಚಿಸಲು ಮುಂದಾದ ತಂಡ

# ನಿಮಗೂ ಕರೆ ಬಂದೀತು, ಎಚ್ಚರ!

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಹಣ ವಂಚಕರ ತಂಡವೊಂದು ಪಟ್ಟಣದ ಖಾಸಗಿ ವೈದ್ಯ ಡಾ. ಎಸ್.ಸಿ. ಚವಡಿ ಅವರಿಗೆ ವಿಡಿಯೋ ಕರೆ ಮಾಡಿ ನಿರಂತರ 22 ಘಂಟೆಗಳ ಕಾಲ ಡಿಜಿಟಲ್ ಅರೆಸ್ಟ್ ಹೆಸರಿನಲ್ಲಿ ವಿಚಾರಣೆಗೆ ಒಳಪಡಿಸಿ ಹಣ ಪಡೆಯುವಲ್ಲಿ ಯಶಸ್ಸು ಕಾಣದೇ ಹೋದ ಘಟನೆ ತಡವಾಗಿ ಬೆಳಕಿಗೆ ಬಂದಿದೆ.



ನ್ಯಾಶನಲ್ ಇನ್ವೆಸ್ಟಿಗೇಶನ್ ಆಥಾರಿಟಿ ಆಫ್ ಇಂಡಿಯಾ ಹೆಸರಲ್ಲಿ ಜೂನ್ 11ರಂದು 3 ಘಂಟೆ 7 ನಿಮಿಷಕ್ಕೆ ವೈದ್ಯ ಚವಡಿಯವರಿಗೆ ಕರೆ ಮಾಡಿ, ನೀವು ಮನಿ ಲ್ಯಾಂಡರಿಂಗ್ ಪ್ರಕರಣದಲ್ಲಿ ಕೆನರಾ ಬ್ಯಾಂಕ್‌ನಲ್ಲಿ ಅಪಾರ ಪ್ರಮಾಣದ ಹಣ ದುರ್ಬಳಕೆ ಮಾಡಿದ್ದೀರಿ. ನಿಮ್ಮ ಹೆಸರಿನಲ್ಲಿ ಮುಂಬೈಯ ಕಲೋಬಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹೀಗಾಗಿ ನಿಮ್ಮನ್ನು ವಿಡಿಯೋ ಕರೆಯಲ್ಲಿ ವಿಚಾರಣೆಗೆ ಒಳಪಡಿಸಲಾಗಿದೆ ಎಂದು ತಿಳಿಸಿದರು.

ವಿಚಾರಣೆಗೆ ಮೊದಲು ವಿಜಯಕುಮಾರ ಎನ್ನುವ ವ್ಯಕ್ತಿಯೊಬ್ಬ ಇನ್‌ಸ್ಪೆಕ್ಟರ್ ಎಂದು ಹೇಳಿಕೊಂಡು ಎಲ್ಲ ವಿಚಾರಣೆ ನಡೆಸಿ, ನೀವು ವಯೋವೃದ್ಧರಾಗಿದ್ದು, ನಿಮ್ಮನ್ನು ಇಲ್ಲಿಗೆ ಕರೆಸಿ ವಿಚಾರಣೆ ಮಾಡುವದು ಸಮಂಜಸವಲ್ಲ ಎಂದು ತಿಳಿದು ವಿಡಿಯೋ ಕಾಲ್‌ನಲ್ಲಿ ವಿಚಾರಣೆ ಮಾಡುತ್ತಿದ್ದೇವೆ. ಮುಂದೆ ಡಿಸಿಪಿ ನಿಮ್ಮ ಜೊತೆ ವಿಚಾರಣೆ ಮಾಡುವರು. ಅವರೊಂದಿಗೆ ನಯ-ವಿನಯದೊಂದಿಗೆ ನಡೆದುಕೊಳ್ಳಿ ಎಂದು ತಿಳಿಸಿದ್ದ.

ನರೇಶ ಗೋಯಲ್ ಹಾಗೂ ಅವರ ಗ್ಯಾಂಗ್‌ನವರು ನಿಮ್ಮನ್ನು ಹಿಂಬಾಲಿಸುತ್ತಿದ್ದಾರೆ. ನೀವು ಈ ವಿಷಯವನ್ನು ಯಾರಿಗೂ ತಿಳಿಸಬೇಡಿ. ಮನೆಯಲ್ಲಿ ನಿಮ್ಮ ಮನೆಯವರೊಂದಿಗೆ ಸಂಶಯ ಬರದಂತೆ ನಡೆದುಕೊಳ್ಳಿ, ಅವರು ನಿಮ್ಮನ್ನು ಕೊಲೆ ಮಾಡಲು ಹಿಂಬಾಲಿಸುತ್ತಿದ್ದಾರೆ. ಹೀಗಾಗಿ ಗೌಪ್ಯ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ. ನಂತರ ಮರುದಿನ ಮಧ್ಯಾಹ್ನ 12 ಘಂಟೆಗೆ ಡಿಸಿಪಿ ದಯಾನಾಯಕ ವಿಚಾರಣೆ ಮಾಡಲು ಪ್ರಾರಂಭಿಸಿ, ನಾವು ವಿಚಾರಣೆ ಮಾತ್ರ ಮಾಡುತ್ತೇವೆ ನಂತರ ಸುಪ್ರೀಂ ಕೋರ್ಟಿಗೆ ಪ್ರಕರಣ ದಾಖಲಿಸುತ್ತೇವೆ. ಅಲ್ಲಿ ನಿಮ್ಮ ಮಾಹಿತಿ ಒದಗಿಸಲಾಗುತ್ತದೆ. ಆಗ ನೀವು ವಕೀಲರನ್ನು ನೇಮಕ ಮಾಡಿಕೊಳ್ಳಬೇಕು ಎಂದು ತಿಳಿಸಿದರು. ತರುವಾಯ, ಪಟ್ಟಣದಲ್ಲಿ ವೈದ್ಯರು ಕೋಣೆಯಲ್ಲಿ ಬಂಧಿಯಾಗಿದ್ದಾರೆ ಎಂಬ ಸುದ್ದಿ ತಿಳಿದು ಊರಿನ ಗುಂಪೊಂದು ಮನೆಗೆ ಪೊಲೀಸರೊಂದಿಗೆ ಧಾವಿಸಿ ಬಂದು ಬಾಗಿಲು ಮುರಿಯುವ ಪ್ರಯತ್ನ ಮಾಡಿದಾಗ ಡಾ. ಎಸ್.ಸಿ. ಚವಡಿ ಬಾಗಿಲು ತೆರೆದರು. ಆಗ ಮುಳಗುಂದ ಸಿಪಿಐ ಸಂಗಮೇಶ ಶಿವಯೋಗಿ ವಂಚಕರ ವಿಡಿಯೋ ಕಾಲ್‌ನಲ್ಲಿ ಮಾತನಾಡಲು ಪ್ರಾರಂಭಿಸಿದಾಗ ವಂಚಕರು ವಿಡಿಯೋ ಕಾಲ್ ಕಟ್ ಮಾಡಿದ್ದಾರೆ.

ಈ ಕುರಿತು ಗದಗ ಸೈಬರ್ ಕ್ರೈಮ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದು, ಮುಂದಿನ ತನಿಖೆ ನಡೆದಿದೆ.

> ಪ್ರಕರಣದ ಕುರಿತು ಈಗಾಗಲೇ ಸೈಬರ್ ಕ್ರೈಂ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಇತ್ತೀಚೆಗೆ ಸೈಬರ್ ಅಪರಾಧ ಪ್ರಕರಣಗಳು ಹೆಚ್ಚಾಗಿದ್ದು, ಸಾರ್ವಜನಿಕರು ಇದರ ಬಗ್ಗೆ ಭಯ ಬೀಳದೇ ಮುಕ್ತವಾಗಿ ಪೊಲೀಸ್ ಠಾಣೆಗೆ ವಿಷಯ ತಿಳಿಸಿ. ಇಂತಹ ಪ್ರಕರಣದಲ್ಲಿ ನಿಮ್ಮ ವೈಯಕ್ತಿಕ ಮಾಹಿತಿಯನ್ನು ಯಾರೊಂದಿಗೂ ಹಂಚಿಕೊಳ್ಳಬಾರದು. ಯಾವದೇ ಓಟಿಪಿಯನ್ನು ಜಾಲತಾಣದಲ್ಲಿ ಹಂಚಿಕೊಳ್ಳಬಾರದು.
>
> **- ಸಂಗಮೇಶ ಶಿವಯೋಗಿ.**
> ಸಿಪಿಐ ಮುಳಗುಂದ.

### ಸರ್ಕಾರಿ ಶಾಲೆಗಳ ಮಕ್ಕಳಿಗೆ ಟೈ-ಬೆಲ್ಟ್ ವಿತರಣೆ, ಸಿಹಿ ಭೋಜನ

# ಸಮುದಾಯದ ಸಹಭಾಗಿತ್ವದಿಂದ ಶಾಲೆಗಳ ಸಬಲೀಕರಣ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯನ್ನೇ ಗುರಿಯಾಗಿಸಿಕೊಂಡು ಗುಣಾತ್ಮಕ ಕಲಿಕೆಗೆ ಹೆಚ್ಚು ಒತ್ತು ನೀಡಲಾಗುತ್ತಿದೆ. ದಾನಿಗಳ ಸಹಾಯ ಸರ್ಕಾರಿ ಶಾಲೆಗಳ ಮಕ್ಕಳ ಶಿಕ್ಷಣಕ್ಕೆ ಪೂರಕವಾಗಿದ್ದು, ಸಮುದಾಯದ ಸಹಭಾಗಿತ್ವದಿಂದ ಸರ್ಕಾರಿ ಶಾಲೆಗಳ ಸಬಲೀಕರಣ ಸಾಧ್ಯವೆಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಶೆಟ್ಟೆಪ್ಪನವರ ಹೇಳಿದರು.



ಸೋಮುವಾರ ಗದಗ ಶಹರ ರಂಗನವಾಡಿಯ ಸರ್ಕಾರಿ ಶಾಲೆ ನಂ.11ರಲ್ಲಿ ಶಿಕ್ಷಣ ಪ್ರೇಮಿಗಳಾದ ರಾಜಣ್ಣ ಗುಡಿಮನಿ ಅವರು ಶಾಲಾ ಮಕ್ಕಳಿಗೆ ಕೊಡಮಾಡಿದ ಟೈ-ಬೆಲ್ಟ್ ವಿತರಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳತ್ತ ಸಮುದಾಯವು ಬಂದು ಮಕ್ಕಳಿಗೆ ಕೊಡುಗೆ ನೀಡುತ್ತಿರುವುದು ಹೆಮ್ಮೆಯ ಸಂಗತಿ. ಕಲಿಕೆಯೊಂದಿಗೆ ವಿದ್ಯಾರ್ಥಿಗಳಲ್ಲಿ ಶಿಸ್ತು ಮೂಡಿಬರುವುದು ಹಾಗೂ ಮೌಲ್ಯಗಳ ಮಹತ್ವತೆಯನ್ನು ಮಕ್ಕಳಲ್ಲಿ ನಾವು ತುಂಬಬೇಕಾಗಿದೆ ಎಂದರು.

ಗದಗ ಶಹರ ಸಂಪನ್ಮೂಲ ಕೇಂದ್ರದ ಸಮನ್ವಯಾಧಿಕಾರಿ ಎಸ್.ಪಿ. ಪ್ರಭಯ್ಯನಮಠ ಮಾತನಾಡಿ, ಸರ್ಕಾರಿ ಶಾಲೆಗಳ ದಾಖಲಾತಿ ಹೆಚ್ಚುತ್ತಿರುವುದು ಹರ್ಷ ತಂದಿದೆ. ಸಮುದಾಯದ ಸಹಭಾಗಿತ್ವವು ಸರ್ಕಾರಿ ಶಾಲೆಗಳ ಬಲವರ್ಧನೆಗೆ ಪುಷ್ಠಿ ನೀಡುತ್ತಿದೆ ಎಂದರು. ಸುಜಾತಾ ಗುಡಿಮನಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಸರ್ಕಾರಿ ಶಾಲೆಗಳ ಮಕ್ಕಳು ಪ್ರತಿಭಾನ್ವಿತರಾಗಿದ್ದು, ಅವರ ಶೈಕ್ಷಣಿಕ ಅಭಿವೃದ್ಧಿಗೆ ಕೈಜೋಡಿಸುವುದು ನಮ್ಮ ಕರ್ತವ್ಯ ಎಂದರು.

ಶಿಕ್ಷಣ ಸಂಯೋಜಕರಾದ ಮುರಳಿ ಸೊಲ್ಲಾಪೂರ ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳ ಮನಸ್ಸು ಸೂಕ್ಷ್ಮವಾಗಿದ್ದು, ಉಳಿದ ಶಾಲೆಗಳ ಮಕ್ಕಳಂತೆ ನಮ್ಮ ಶಾಲೆಯ ಮಕ್ಕಳು ಬೆಳೆಯಬೇಕೆಂಬ ಸದಾಶಯ ನಮ್ಮದು. ದಾನಿಗಳು ಮುಂದೆ ಬಂದು ಮಕ್ಕಳಲ್ಲಿ ಶಿಸ್ತು ಮೂಡಿಸಲು ಟೈ-ಬೆಲ್ಟ್ ನೀಡುವ ಮೂಲಕ ಸಹಾಯ ಸಲ್ಲಿಸಿದ್ದು ಅಭಿನಂದನೀಯ ಎಂದರು.

ಶಿಕ್ಷಕಿ ರೇಣುಕಾ ಹೊಸಮನಿ ಹಾಗೂ ಮಂಜುಳಾ ಕೊಳ್ಳಿಯವರ ಪ್ರಾರ್ಥಿಸಿದರು. ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಸ್ವಾಗತಿಸಿದರು. ಬಿ.ಆರ್.ಪಿ ಶ್ಯಾಮ ಲಾಂಡೆ ನಿರೂಪಿಸಿದರು. ಸಿ.ಆರ್.ಪಿ ಕೆ.ಎ. ಜಲಗೇರಿ ಪರಿಚಯಿಸಿದರು. ಮುಖ್ಯೋಪಾಧ್ಯಾಯೆ ಭಾರತಿ ಕುಲಕರ್ಣಿ ವಂದಿಸಿದರು.

### ಅರ್ಧಕ್ಕೇ ನಿಂತ ಪುಟ್ಟರಾಜ ಗವಾಯಿಗಳವರ ಸ್ಮಾರಕ ಭವನ

# ಭಕ್ತರ ಮನಸ್ಸಿಗೆ ನೋವುಂಟಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಡೆದಾಡುವ ದೇವರು, ಅಂಧ-ಅನಾಥರ ಬಾಳಿನ ಆಶಾಕಿರಣ, ಮಹಾನ್ ಪವಾಡ ಪುರುಷರಾಗಿರುವ ಶ್ರೀ ಗಾನಯೋಗಿ ಪಂ. ಪುಟ್ಟರಾಜ ಗವಾಯಿಗಳವರ ಸ್ಮಾರಕ ಭವನ ಕಾಮಗಾರಿ ಸುಮಾರು 11 ವರ್ಷದಿಂದ ಸ್ಥಗಿತಗೊಂಡಿರುವುದು ಗವಾಯಿಗಳವರ ಭಕ್ತರ ಮನಸ್ಸಿಗೆ ನೋವನ್ನುಂಟುಮಾಡಿದೆ ಎಂದು ಕ್ರಾಂತಿ ಸೇನಾ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರವೀಣ ಹಬೀಬ ಹೇಳಿದ್ದಾರೆ.



ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸುಮಾರು 11 ವರ್ಷಗಳಿಂದಲೂ ಕ್ರಾಂತಿ ಸೇನಾ ಗದಗ ಜಿಲ್ಲಾ ಸಂಘಟನೆ ಸೇರಿದಂತೆ ವಿವಿಧ ಸಂಘಟನೆಗಳು, ಪಂಡಿತ್ ಪುಟ್ಟರಾಜ ಗವಾಯಿಗಳವರ ಭಕ್ತರ ವತಿಯಿಂದ ಸಾಕಷ್ಟು ಬಾರಿ ಹೋರಾಟ ನಡೆಸಿ ಗದಗ ಜಿಲ್ಲಾಧಿಕಾರಿಗಳಿಗೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಮಾಡಲಾಗಿದೆ. ಆದರೂ, ಈ ಸ್ಮಾರಕ ಭವನದ ಕಾಮಗಾರಿ ಪೂರ್ಣಗೊಂಡಿಲ್ಲ.

ಅರ್ಧಕ್ಕೆ ನಿಂತಿರುವ ಈ ಸ್ಮಾರಕ ಭವನ ಅನೈತಿಕ ಚಟುವಟಿಕೆಯ ತಾಣವಾಗಿದೆ. ಕಾರಣ, ಆದಷ್ಟು ಬೇಗ ಪಂ. ಪುಟ್ಟರಾಜ ಗವಾಯಿಗಳವರ ಸ್ಮಾರಕ ಭವನ ಕಾಮಗಾರಿ ಪೂರ್ಣಗೊಳಿಸಿ ಅವರ ಆಶೀರ್ವಾದಕ್ಕೆ ಪಾತ್ರರಾಗಬೇಕೆಂದು ಮನವಿ ಮಾಡಿದ್ದಾರೆ.

# ಕಲ್ಲಯ್ಯಜ್ಜ ಯುವಕ ಮಂಡಳದಿಂದ ಅನ್ನ ಸಂತರ್ಪಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಜನತಾ ಬಜಾರದ ಪೂಜ್ಯ ಶ್ರೀ ಕಲ್ಲಯ್ಯಜ್ಜ ಯುವಕ ಮಂಡಳದ ವತಿಯಿಂದ ಪರಮಪೂಜ್ಯ ಗಾನಯೋಗಿ ಶಿವಯೋಗಿ ಪಂ. ಶ್ರೀ ಪಂಚಾಕ್ಷರಿ ಗವಾಯಿಗಳರವರ 81ನೇ ಹಾಗೂ ಪಂಡಿತ ಶ್ರೀ ಪುಟ್ಟರಾಜ ಗವಾಯಿಗಳರವರ 15ನೇ ಪುಣ್ಯಸ್ಮರಣೋತ್ಸವದ ನಿಮಿತ್ತ ಮಹಾಪೂಜೆ ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮ ಜರುಗಿತು.



ಮುಖ್ಯ ಅತಿಥಿಗಳಾಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿ.ಜಿ. ಮೇರವಾಡೆ, ಶಹರ ಪೊಲೀಸ್ ಠಾಣೆ ಸಿಪಿಐ ಡಿ.ಬಿ. ಪಾಟೀಲ, ಎಸ್.ಎನ್. ಬಳ್ಳಾರಿ, ಮಾರುತಿ ಸೋಳಂಕಿ, ಮಹಮ್ಮದಅಲಿ ಅತ್ತಾರ, ಚಂದ್ರು ಮೇಲಿನಮನಿ, ಉಮರ ಫಾರೂಕ ಹುಬ್ಬಳ್ಳಿ ಮುಂತಾದವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸಮಿತಿಯ ಅಧ್ಯಕ್ಷ ರಾಜು ಡಿ.ರೋಣ, ಉಪಾಧ್ಯಕ್ಷ ರಾಮಣ್ಣ ಎನ್.ಗುರುಜಾಲಕರ, ಕಾರ್ಯದರ್ಶಿ ರಾಘವೇಂದ್ರ ವಿ.ಖೋಡೆ, ಸಹ-ಕಾರ್ಯದರ್ಶಿ ಚನ್ನಪ್ಪ ಗ.ಸಂಗಮ, ಖಜಾಂಚಿ ಗಣೇಶ ಕೆ.ಪಾಟೀಲ, ಸಮಿತಿಯ ಸದಸ್ಯರಾದ ಈರಣ್ಣ ತಿಪ್ಪಶೆಟ್ಟಿ, ಕಾಶೀನಾಥ ಎನ್. ಕಬಾಡಿ, ನಿಂಗಪ್ಪ ಮಾಗಡಿ, ಬುಡೆಲಿ ಅತ್ತಾರ, ರೇವಣಪ್ಪ ರಾಜೂರ, ರಾಜೇಸಾಬ ಸಯ್ಯದ, ಮಂಜುನಾಥ ಕಾಟವಾ, ರಾಜೀವ ರೋಣದ, ರಾಮಣ್ಣ, ಗಣೇಶ, ರಾಘವೇಂದ್ರ, ಈರಣ್ಣ, ಬುಡೆಲಿ ಅತ್ತಾರ, ಕಾಶೀನಾಥ ಕಬಾಡಿ, ಚನ್ನಪ್ಪ ಸೇರಿದಂತೆ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಭಾಷಾಸಾಬ ಮಲ್ಲಸಮುದ್ರ ನಿರೂಪಿಸಿದರು. ರಾಮಣ್ಣ ಗುರುಜಾಲಕರ ವಂದಿಸಿದರು.

### ಅಂಚೆ ಇಲಾಖೆಯ ಗದಗ ವಿಭಾಗ ಮಟ್ಟದ ಪ್ರಶಸ್ತಿ ವಿತರಣಾ ಕಾರ್ಯಕ್ರಮದಲ್ಲಿ ರಮೇಶ ಮಡಿವಾಳರ

# ಗ್ರಾಹಕರ ವಿಶ್ವಾಸಾರ್ಹತೆಗೆ ತಕ್ಕಂತೆ ಸೇವೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದ ಕಡೆಯ ವ್ಯಕ್ತಿಗೂ ವಿವಿಧ ಅಂಚೆ ಸೇವೆ ಕಲ್ಪಿಸುವ ಸದಾವಕಾಶ ಲಭಿಸಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಅಭಿಪ್ರಾಯಪಟ್ಟರು.

ಭಾರತೀಯ ಅಂಚೆ ಇಲಾಖೆಯ ಆಶ್ರಯದಲ್ಲಿ ಜೆ.ಟಿ. ಕಾಲೇಜಿನ ಸಭಾ ಭವನದಲ್ಲಿ ಸೋಮವಾರ ನಡೆದ ಗದಗ ವಿಭಾಗ ಮಟ್ಟದ ಪ್ರಶಸ್ತಿ ವಿತರಣೆ ನೆರವೇರಿಸಿ ಅವರು ಮಾತನಾಡುತ್ತಿದ್ದರು.

ಪದವಿ ಸೇರಿದಂತೆ ವಿವಿಧ ಕ್ಷೇತ್ರದ ಜನರನ್ನು ಅಂಚೆ ಜೀವ ವಿಮೆ ಕ್ಷೇತ್ರದ ವ್ಯಾಪ್ತಿಗೆ ತರುವ ಸದಾವಕಾಶ ಅಂಚೆ ಇಲಾಖೆಗೆ ಸಿಕ್ಕಿದೆ. ಈ ಯೋಜನೆ ಲಾಭವನ್ನು ಗ್ರಾಹಕರಿಗೆ ತಲುಪಿಸುವ ದಿಸೆಯಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲು ಮುಂದಾಗಬೇಕು ಎಂದರು.



ಗ್ರಾಹಕರಿಗೆ ತಂತ್ರಜ್ಞಾನದ ಕೆಲವು ಉನ್ನತ ಅನುಕೂಲಗಳು ಮತ್ತು ಸೇವಾ ವಲಯದಲ್ಲಿ ಹೊಸ ನೀತಿ ರೂಪಿಸುವ ಸಲುವಾಗಿ ಕೇಂದ್ರ ಸರ್ಕಾರ ವಿವಿಧ ಮಹತ್ವದ ಯೋಜನೆಗಳನ್ನು ದೇಶದ ಎಲ್ಲೆಡೆ ಪರಿಚಯಿಸಲು ಅಂಚೆ ಇಲಾಖೆ ಬಗ್ಗೆ ಒಲವು ತೋರುತ್ತಿದೆ. ಹಾಗಾಗಿ ಅಂಚೆ ಇಲಾಖೆ ಸಿಬ್ಬಂದಿ ಕೇಂದ್ರ ಸರ್ಕಾರ ಅಂಚೆ ಇಲಾಖೆಯ ಮೂಲಕ ವಿವಿಧ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಕೆಲಸದ ಹೊಣೆಗಾರಿಕೆಯನ್ನು ಗ್ರಾಹಕರ ವಿಶ್ವಾಸಾರ್ಹತೆಗೆ ತಕ್ಕಂತೆ ಸೇವೆ ನೀಡಲು ಮುಂದಾಗಬೇಕು ಎಂದರು.

ರೋಣ ಉಪ ವಿಭಾಗದ ಅಂಚೆ ನಿರೀಕ್ಷಕ ವೆಂಕಟೇಶರಡ್ಡಿ ಕೊಳ್ಳಿ ಮಾತನಾಡಿ, ರೋಣ ಉಪ ವಿಭಾಗದ ಪ್ರತಿಯೊಬ್ಬ ಉದ್ಯೋಗಿಗಳು ಪರಸ್ಪರ ಪ್ರೀತಿ, ವಿಶ್ವಾಸ ಸ್ನೇಹಪರ ಪಾಲ್ಗೊಳ್ಳುವಿಕೆಯಿಂದಾಗಿ ಗದಗ ವಿಭಾಗ ರಾಷ್ಟ್ರ ಹಾಗೂ ರಾಜ್ಯ, ವಲಯ ಮಟ್ಟದಲ್ಲಿ ಉನ್ನತ ಸ್ಥಾನ ಪಡೆಯಲು ಸಾಧ್ಯವಾಗಿದೆ ಎಂದರು.

ಅಂಚೆ ಸಹಾಯಕ ಬಸವರಾಜ ಸೇಡದ ಮಾತನಾಡಿ, ಜೂನ್ 23ರಂದು ಗದಗ ವಿಭಾಗದ ಎಲ್ಲೆಡೆ ಐಟಿ 2.0 ಅನುಷ್ಠಾನಕ್ಕೆ ಬರಲಿದೆ. ಈ ಕೆಲಸ ಪತ್ರ ಬಟವಾಟೆ ಸೇವಾ ಕ್ಷೇತ್ರದಲ್ಲಿ ಹೊಸ ಭಾಷ್ಯವಾಗಲಿದೆ ಎಂದರು.


ಗದಗ ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕ ಸುನೀಲಕುಮಾರ, ಪ್ರಧಾನ ಅಂಚೆ ಪಾಲಕರಾದ ಮಂಜುಳಾ ಎನ್.ದಂಗಿನಹಾಳ ಮತ್ತಿತರರು ಇದ್ದರು. ಮೇಘಾ ಕುಲಕರ್ಣಿ ಪ್ರಾರ್ಥಿಸಿದರು. ಅನಿತಾ ಕುರಿ, ಸಂತೋಷ ಅಳಗುಂಡಿ ನಿರೂಪಿದರು. ಪ್ರಧಾನ ಅಂಚೆ ಉಪ ಅಂಚೆ ಪಾಲಕರಾದ ದೊಡ್ಡಪ್ಪ ಇಟಗಿ ವಂದಿಸಿದರು.

> ಗದಗ ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕ ಶ್ರೀಕಾಂತ ಜಾಧವ ಪ್ರಾಸ್ತಾವಿಕವಾಗಿ ಮಾತನಾಡಿ, ಅಂಚೆ ಬಟವಾಡೆ ಜೊತೆಗೆ ಉಳಿತಾಯ ಖಾತೆ, ಆರ್.ಡಿ, ಗುಂಪು ವಿಮೆ ಮತ್ತು ವಿವಿಧ ವಿಮಾ ಯೋಜನೆಗಳು ಸೇರಿದಂತೆ ಹಲವು ಬ್ಯಾಂಕಿಂಗ್ ಸೌಲಭ್ಯಗಳನ್ನು ಅಂಚೆ ಇಲಾಖೆ ಜನರ ಮನೆ ಬಾಗಿಲಿಗೆ ತಲುಪಿಸುತ್ತಿದೆ. ಅವುಗಳ ಸದ್ಬಳಕೆಗೆ ಮುಂದಾಗಬೇಕು ಎಂದರು.

# ಮಹಿಳೆ ನಾಪತ್ತೆ: ಪತ್ತೆಗೆ ಮನವಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಮಹಿಳೆಯೊಬ್ಬಳು ನಾಪತ್ತೆಯಾಗಿರುವ ಕುರಿತು ಪ್ರಕರಣ ದಾಖಲಾಗಿದೆ.



ಠಾಣೆಯಲ್ಲಿ ದಾಖಲಾದ ಗುನ್ನಾ ನಂ: 49/2025ರಂತೆ, ಗಜೇಂದ್ರಗಡ ತಾಲೂಕಿನ ನರೇಗಲ್ಲ ಪಟ್ಟಣ ಪಂಚಾಯಿತಿ ಹಿಂಭಾಗದಲ್ಲಿ ವಾಸವಾಗಿದ್ದ ಸರಸ್ವತಿ ಯಮನೂರಪ್ಪ ಕುಂಚಿಕೊರವರ (19) ಇವಳು ಜೂನ್ 4ರಂದು ರಾತ್ರಿ 8.15ರಿಂದ 8.30 ಗಂಟೆಯ ನಡುವಿನ ಅವಧಿಯಲ್ಲಿ ನರೇಗಲ್ಲ ಪಟ್ಟಣದ ಡಾ. ಶಿವು ರೋಣದ ಇವರ ಆಸ್ಪತ್ರೆಯ ಮುಂಭಾಗದಿಂದ ನಾಪತ್ತೆಯಾಗಿದ್ದಾಳೆ.

ಸದರಿ ಮಹಿಳೆಯ ಕುರಿತು ಮಾಹಿತಿ ಲಭ್ಯವಾದಲ್ಲಿ ಠಾಣೆಯ ಪಿಎಸ್‌ಐ- 08381-268233/9480804454, ಸಿಪಿಐ ರೋಣ-9480804434 ಅಥವಾ ಗದಗ ಪೊಲೀಸ್ ಕಂಟ್ರೋಲ್ ರೂಮ್- 9480804400 ಇಲ್ಲಿಗೆ ತಿಳಿಸುವಂತೆ ಪ್ರಕಟಣೆ ಕೋರಿದೆ.

# ವಂಚಕಿ ಐಶ್ವರ್ಯ ಕೇಸ್: ಡಿ.ಕೆ. ಸುರೇಶ್‌ಗೂ ತಟ್ಟಿದ ಸಂಕಷ್ಟದ ಬಿಸಿ - ED ಸಮನ್ಸ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಾರಾಹಿ ಜ್ಯುವೆಲ್ಲರಿ ಮಾಲೀಕರಿಂದ 9 ಕೋಟಿ ಗೋಲ್ಡ್ ಖರೀದಿಸಿ ವಂಚನೆ ಪ್ರಕರಣಕ್ಕೆ ಸಮಬಂಧಿಸಿದಂತೆ ಮಾಜಿ ಸಂಸದ ಡಿ.ಕೆ.ಸುರೇಶ್ ಅವರಿಗೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಸಮನ್ಸ್ ಜಾರಿಗೊಳಿಸಿದ್ದಾರೆ.

ಜೂನ್ 19ರಂದು ವಿಚಾರಣೆಗೆ ಹಾಜರಾಗುವಂತೆ ಡಿ.ಕೆ.ಸುರೇಶ್ ಅವರಿಗೆ ಇ.ಡಿ. ಅಧಿಕಾರಿಗಳು ಸಮನ್ಸ್ ನೀಡಿದ್ದಾರೆ. ಮಾಜಿ ಸಂಸದ ಡಿಕೆ ಸುರೇಶ್ ಅವರ ಸಹೋದರಿ ಅಂತ ಹೇಳಿಕೊಂಡು ಐಶ್ವರ್ಯಗೌಡ ಕೋಟ್ಯಾಂತರ ರೂಪಾಯಿ ಚಿನ್ನಾಭರಣ ವಂಚಿಸಿರುವ ಆರೋಪ ಕೇಳಿ ಬಂದಿತ್ತು. ಐಶ್ವರ್ಯಗೌಡ ಹೇಳಿಕೆ ಮತ್ತು ಸಾಕ್ಷಿಗಳನ್ನು ಆಧರಿಸಿ ಇಡಿ ಗುರುವಾರ ಬೆಳಗ್ಗೆ 11 ಗಂಟೆಗೆ ವಿಚಾರಣೆಗೆ ಡಿಕೆ ಸುರೇಶ್ ಅವರಿಗೆ ಸೂಚನೆ ನೀಡಿದೆ.

ಜೂನ್ 19ರಂದು ವಿಚಾರಣೆಗೆ ಹಾಜರಾಗುವುದು ಕಷ್ಟ, ಆದ್ದರಿಂದ ಜೂನ್ 23ರಂದು ಹಾಜರಾಗುವುದಾಗಿ ಇ.ಡಿಗೆ ತಿಳಿಸಿರುವುದಾಗಿ ಮಾಜಿ ಸಂಸದ ಡಿ.ಕೆ.ಸುರೇಶ್ ಪ್ರತಿಕ್ರಿಯೆ ನೀಡಿದ್ದಾರೆ. ಡಿ.ಕೆ.ಸುರೇಶ್ ಅವರ ಸಹೋದರಿ, ಅನೇಕ ರಾಜಕೀಯ ನಾಯಕರ ಪರಿಚಯವಿದೆ' ಎಂದು ನಂಬಿಸಿ ಸಾಲದ ರೂಪದಲ್ಲಿ ಚಿನ್ನ ಪಡೆದು ವಂಚಿಸಿದ ಆರೋಪ ಐಶ್ವರ್ಯಾ ಗೌಡ ವಿರುದ್ಧ ಕೇಳಿ ಬಂದಿತ್ತು.

ವಾರಾಹಿ ವರ್ಲ್ಡ್ ಆಫ್ ಗೋಲ್ಡ್ ಚಿನ್ನದಂಗಡಿಯ ಮಾಲಕಿ ವನಿತಾ ಎಸ್ ಐತಾಳ್ ಎಂಬುವವರು ನೀಡಿದ್ದ ದೂರಿನನ್ವಯ ಐಶ್ವರ್ಯಾ ಗೌಡ, ಹರೀಶ್ ಕೆ.ಎನ್ ಹಾಗೂ ನಟ ಧರ್ಮೇಂದ್ರ ಬಿ ಅವರ ವಿರುದ್ಧ ಚಂದ್ರಾ ಲೇಔಟ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka